# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 122 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 29–11–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 02 Issue - 122 | RNI No: KARKAN/2023/88462 | Chitradurga | Date: 29-11-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಭ್ರಷ್ಟಾಚಾರ ಈ ರಾಜರೋಷವಾಗಿ ನಡೆಯುತ್ತಿದೆ: ಮುಖ್ಯಮಂತ್ರಿ ಚಂದ್ರು 2

ಕನ್ನಡದ ಜ್ಯೋತಿ ನಿರಂತರ ಬೆಳಗಲಿ: ಶಾಸಕ ರಘುಮೂರ್ತಿ. 3

ಬದುಕಿಗೆ ಆಧಾರವಾದ ಸರ್ಕಾರದ ಗೃಹಲಕ್ಷ್ಮೀ ಯೋಜನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಎಲ್.ಶ್ರೀಶೈಲ ಅವರಿಗೆ ಪಿಹೆಚ್‌ಡಿ ಪದವಿ

» ಚಿತ್ರದುರ್ಗ



ಚಿತ್ರದುರ್ಗ ನಗರದ ಸರಸ್ವತಿ ಕಾನೂನು ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಎಲ್.ಶ್ರೀಶೈಲ ಅವರಿಗೆ ಕಾನೂನು ಅಧ್ಯಯನ ವಿಷಯದಲ್ಲಿ ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯವು ಪಿಹೆಚ್‌ಡಿ ಪದವಿ ನೀಡಿದೆ. ಮಂಗಳೂರಿನ ಎಸ್‌ಡಿಎಂ ಕಾನೂನು ಕಾಲೇಜಿನ ಪ್ರಾಂಶುಪಾಲ ಡಾ.ತಾರನಾಥ ಅವರ ಮಾರ್ಗದರ್ಶನದಲ್ಲಿ "ಪರಿಸರ ಸಂರಕ್ಷಣೆಯಲ್ಲಿ ಸ್ಥಳೀಯ ಸ್ವಯಂ ಸರ್ಕಾರದ ಪಾತ್ರದ ಮೇಲೆ ನಿರ್ಣಾಯಕ ಅಧ್ಯಯನ" ಎಂಬ ವಿಷಯ ಕುರಿತು ಮಹಾ ಪ್ರಬಂಧ ಮಂಡಿಸಿದ್ದರು.

### ಟೇಕ್ವಾಂಡೋ ಇಬ್ಬರು ವಿದ್ಯಾರ್ಥಿಗಳಿಗೆ ಕಂಚು




» ಚಿತ್ರದುರ್ಗ

ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಕರ್ನಾಟಕ ಮಿನಿ ಒಲಂಪಿಕ್ ಟೇಕ್ವಾಂಡೋ ಕ್ರೀಡೆಯಲ್ಲಿ ಭಾಗವಹಿಸಿದ್ದ ನಗರದ ಡಾನ್‌ಬೋಸ್ಕೋ ಶಾಲೆಯ ನಾಜ್ನೀನ್ ಕೌಸರ್ ಐ.ಎ. ದಾನಿಶ್‌ಗುರು ಇವರುಗಳು ಕಂಚಿನ ಪದಕ ಗಳಿಸಿ ಶಾಲೆಗೆ ಕೀರ್ತಿ ತಂದಿದ್ದಾರೆ.ತರಬೇತುದಾರರಾದ ರುದ್ರೇಶ್, ಸವಿತ, ಫಾದರ್ ಉದಯಕುಮಾರ್ ಇವರುಗಳು ಇಬ್ಬರು ಕ್ರೀಡಾಪಟುಗಳಿಗೆ ಶುಭ ಹಾರೈಸಿದ್ದಾರೆ.

### ನ.30ಕ್ಕೆ ಕಡೆ ಕಾರ್ತಿಕ

» ಚಿತ್ರದುರ್ಗ

ಗಾಯತ್ರಿ ಕಲ್ಯಾಣ ಮಂಟಪದ ಆವರಣದಲ್ಲಿರುವ ಗಾಯತ್ರಿ ದೇವಸ್ಥಾನದಲ್ಲಿ ನ.30 ರಂದು ಸಂಜೆ 7–30 ಕ್ಕೆ ಕಡೆಯ ಕಾರ್ತಿಕ ದೀಪೋತ್ಸವ ಹಮ್ಮಿಕೊಳ್ಳಲಾಗಿದೆ.

ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಬ್ರಾಹ್ಮಣ ಸಂಘದ ಕಾರ್ಯದರ್ಶಿ ಡಿ.ಜಿ.ಪ್ರಾಣೇಶ್‌ರಾವ್ ಸಂಘದ ಪರವಾಗಿ ವಿನಂತಿಸಿದ್ದಾರೆ.

### ಕನ್ನಡ ವಿಕಾಸ ರತ್ನ ಪ್ರಶಸ್ತಿಗೆ ಆಯ್ಕೆ

» ಚಿತ್ರದುರ್ಗ



ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆಯಿಂದ ಪ್ರತಿ ವರ್ಷವೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ನೀಡಲಾಗುವ ರಾಜ್ಯ ಮಟ್ಟದ ಪ್ರತಿಷ್ಠಿತ ಕನ್ನಡ ವಿಕಾಸ ರತ್ನ ಪ್ರಶಸ್ತಿಗೆ ಜಾನಪದ ಜಾಗೃತಿ ಪರಿಷತ್ ರಾಜ್ಯಾಧ್ಯಕ್ಷ ಚಿತ್ರದುರ್ಗದ ಹೆಚ್.ಪ್ಯಾರೇಜಾನ್ ಆಯ್ಕೆಯಾಗಿದ್ದಾರೆ.ಕೊಳಗೇರಿನಿವಾಸಿಗಳಹಕ್ಕಿಗಾಗಿ ಸಾಕಷ್ಟು ಹೋರಾಟ ಸೇರಿದಂತೆ ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸುತ್ತಿರುವ ಹೆಚ್.ಪ್ಯಾರೇಜಾನ್‌ರವರ ಸಾಮಾಜಿಕ ಕಳಕಳಿಯನ್ನು ಗುರುತಿಸಿ ನ.30 ರಂದು ಮೈಸೂರಿನಲ್ಲಿ ನಡೆಯುವ ಕನ್ನಡ ಹಬ್ಬದಲ್ಲಿ ಕನ್ನಡ ವಿಕಾಸ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದೆಂದು ವೇದಿಕೆಯ ಸಂಸ್ಥಾಪಕ ಅಧ್ಯಕ್ಷೆ ಯಮುನಾ ಹೆಚ್. ಎಲ್.ತಿಳಿಸಿದ್ದಾರೆ.

---

ಜಿಲ್ಲಾ ಕೃಷಿ ಅಂಕಿ–ಅಂಶ ಸಮನ್ವಯ ಸಮಿತಿ ಸಭೆ

# ಬೆಳೆ ಕಟಾವು ಪ್ರಯೋಗ ತಪ್ಪು ದತ್ತಾಂಶ ನಮೂದು: ಕ್ರಿಮಿನಲ್ ಕೇಸ್ ದಾಖಲಿಸುವ ಡಿಸಿ ಎಚ್ಚರಿಕೆ

» ಚಿತ್ರದುರ್ಗ

ಬೆಳೆ ಕಟಾವು ಪ್ರಯೋಗ ನಡೆಸಿ, ಉದ್ದೇಶ ಪೂರ್ವಕವಾಗಿ ತಪ್ಪು ದತ್ತಾಂಶವನ್ನು ತಂತ್ರಾಂಶದಲ್ಲಿ ನಮೂದು ಮಾಡಿರುವುದು ಕಂಡು ಬಂದರೆ, ಸಂಬಂದಿಸಿದ ಅಧಿಕಾರಿಯ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ, ಗುರವಾರ ಜರುಗಿದ 2024–25ನೇ ಸಾಲಿನ ಜಿಲ್ಲಾ ಮಟ್ಟದ ಕೃಷಿ ಅಂಕಿ–ಅಂಶಗಳ ಎರಡನೆ ತ್ರೈಮಾಸಿಕ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಬಾರಿ ಸರಿಯಾದ ಸಮಯಕ್ಕೆ ಕಟಾವು ಪ್ರಯೋಗ ಮಾಡದೆ ಅಧಿಕಾರಿಗಳು ನಿರ್ಲಕ್ಷ್ಯ ತೋರುತ್ತಿದ್ದರ ಪರಿಣಾಮ, ರೈತರು ಸಮಸ್ಯೆ ಅನುಭವಿಸುವಂತಾಯಿತು. ಈ ಬಾರಿಯ ಮುಂಗಾರು ಹಂಗಾಮಿನ ಬೆಳೆ ಕಟಾವು ಪ್ರಯೋಗಗಳು ನಿಗದಿತ ಸಮಯದಲ್ಲಿಯೇ ಪೂರ್ಣಗೊಳಿಸಬೇಕು. ಒಂದು ವೇಳೆ ಬೆಳೆ ಕಟಾವು ಪ್ರಯೋಗ ತಪ್ಪಿ ಹೋಗಿ, ರೈತರಿಗೆ ವಿಮೆ ಬರುವಲ್ಲಿ ತೊಂದರೆಯಾದರೆ, ಇದಕ್ಕೆ ಕಾರಣರಾದ ಅಧಿಕಾರಿಗಳನ್ನು ಅಮಾನತುಗೊಳಿಸಿ, ಅವರ ವೇತನದಿಂದಲೇ ವಿಮೆ ಮೊತ್ತ ಭರಿಸಲು ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅಧಿಕಾರಿಗಳು ಬೆಳೆ ಕಟಾವು ಪ್ರಯೋಗಕ್ಕೆ ನಿಗದಿ ಪಡಿಸಿದ ಬೆಳೆ ಬಿತ್ತನೆಯಾಗಿಲ್ಲ ಎಂದು ಕಚೇರಿಯಲ್ಲಿಯೇ ಕೂತು ವರದಿ ನೀಡಬಾರದು. ಸ್ಥಳಕ್ಕೆ ಹೋಗಿ ವೀಕ್ಷಣೆ ನಡೆಸಬೇಕು. ಪರ್ಯಾಯ ಜಮೀನುಗಳಲ್ಲಿ ನಿಗದಿ ಪಡಿಸಿದ ಬೆಳೆ ಇದ್ದರೆ, ಅನುಮತಿ ಪಡೆದು ಬೆಳೆ ಕಟಾವು ಪ್ರಯೋಗ ನಡೆಸಬೇಕು. ಈ ಕುರಿತು ಕೃಷಿ, ತೋಟಗಾರಿಕೆ, ಗ್ರಾಮೀಣಾಭಿವೃದ್ಧಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಡೆಸಬೇಕು. ಬೆಳೆ ಬಿತ್ತನೆಯಾಗಿಲ್ಲ ಎಂದು ಒಂದು ವೇಳೆ ತಪ್ಪಾಗಿ ವರದಿ ನೀಡಿದರೆ, ಅಂತಹ ಅಧಿಕಾರಿಯ ವಿರುದ್ದ ನಿರ್ದಾಕ್ಷಿಣ್ಯವಾಗಿ ಶಿಸ್ತು ಕ್ರಮಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

**ಅನೂರ್ಜಿತ ಬೆಳೆ ಕಟಾವು ಅಧಿಕಾರಿಗಳ ಅಮಾನತು:**

ಸರಿಯಾದ ಸಮಯಕ್ಕೆ ಬೆಳೆ ಕಟಾವು ಪ್ರಯೋಗ ಕೈಗೊಳ್ಳದೇ, ಬೆಳೆ ಕೊಯ್ಲು ಮುಗಿದ ನಂತರ ಅದೇ ಜಮೀನನಲ್ಲಿ ಕೃತಕವಾಗಿಕಟಾವುಪರೀಕ್ಷೆನಡೆಸಿ,ಪ್ರಯೋಗ ಅನೂರ್ಜಿತಗೊಳಿಸಿದ ಅಧಿಕಾರಿಗಳನ್ನು ಕೂಡಲೇ ಅಮಾನತು ಮಾಡುವಂತೆ, ಹಿರಿಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸಭೆಯಲ್ಲಿ ನಿರ್ದೇಶನ ನೀಡಿದರು. ಇದರೊಂದಿಗೆ ಅಂತಹ ಎಲ್ಲಾ ಬೆಳೆ ಕಟಾವು ಪ್ರಯೋಗಗಳನ್ನು ನಡೆಸಿದ ಅಧಿಕಾರಿಗಳಿಂದ ವಿವರಣೆ ಪಡೆದುಕೊಳ್ಳಬೇಕು, ತಹಶೀಲ್ದಾರರು ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಗಳನ್ನು ನಡೆಸುವಂತೆ ಸೂಚಿಸಿದರು.

2024–25 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಗೆ ಒಟ್ಟು 4,166 ಬೆಳೆ ಕಟಾವು ಪ್ರಯೋಗಗಳನ್ನು ನಿಗದಿ ಪಡಿಸಲಾಗಿದೆ. ಇದರಲ್ಲಿ 4,018 ಪ್ರಯೋಗಳನ್ನು ನಡೆಸಿ ನಮೂನೆ–1 ಭರ್ತಿ ಮಾಡಲಾಗಿದೆ. 148 ಪ್ರಯೋಗಳು ನಿಯೋಜಿಸಿದ ಅಧಿಕಾರಿಗಳು ಕೈಗೊಂಡಿಲ್ಲ. ನಮೂನೆ–2 ರಲ್ಲಿ 3,512 ಪ್ರಯೋಗಳನ್ನು ನಡೆಸಲಾಗಿದೆ. 506 ಪ್ರಯೋಗಳು ಬಾಕಿಯಿವೆ. 108 ಕಂದಾಯ, 10 ಕೃಷಿ, 28 ತೋಟಗಾರಿಕೆ ಹಾಗೂ 02 ಗ್ರಾಮೀಣಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಬೆಳೆ ಕಟಾವು ಪ್ರಯೋಗದ ನಮೂನೆ–1 ಬಾಕಿ ಇವೆ. ಹಿಂಗಾರು ಹಂಗಾಮಿಗೆ 1,190 ಬೆಳ ಕಟಾವು ಪ್ರಯೋಗಳು ಜಿಲ್ಲೆಗೆ ನಿಗಿದಿಯಾಗಿದ್ದು, ಇವುಗಳನ್ನು ಇಲಾಖೆವಾರು ಹಂಚಿಕೆ ಮಾಡಿರುವುದಾಗಿ ಜಿಲ್ಲಾ ಅಂಕಿ–ಸಂಖ್ಯೆ ಸಂಗ್ರಹಣಾಧಿಕಾರಿ ರವಿಕುಮಾರ್.ಎನ್. ಸಭೆಯಲ್ಲಿ ಮಾಹಿತಿ ನೀಡಿದರು.

**ಕೃಷಿ ಗಣತಿ ಪೂರ್ಣಕ್ಕೆ ನ.30 ಕಡೆಯ ದಿನ :** ಕೇಂದ್ರ ಪುರಸ್ಕೃತ 11ನೇ ಕೃಷಿ ಗಣತಿಯ ಎರಡನೇ ಹಂತದ ಸರ್ವೇ ಕಾರ್ಯ ಪೂರ್ಣಗೊಳಿಸಲು ನ.30 ಕಡೆಯ ದಿನವಾಗಿದೆ. ಹಿಡುವಳಿ ಗುಣ–ಲಕ್ಷಣ, ಬೆಳೆ ಪದ್ದತಿ, ನೀರಾವರಿ ವಸ್ತುಸ್ಥಿತಿ ಸೇರಿದಂತೆ ಇತರೆ ಅಗತ್ಯ ದತ್ತಾಂಶಗಳನ್ನು ಸಂಗ್ರಹಿಸಲು ಜಿಲ್ಲೆಯಲ್ಲಿ 206 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಇದರಲ್ಲಿ 55 ಗ್ರಾಮಗಳಲ್ಲಿ ಸರ್ವೇ ಕಾರ್ಯ ಪೂರ್ಣಗೊಂಡಿದೆ. 155 ಗ್ರಾಮಗಳ ಸರ್ವೇ ಕಾರ್ಯ ಪ್ರಗತಿಯಲ್ಲಿದೆ. ನ.30ರ ಒಳಗೆ ಸರ್ವೇ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಕೃಷಿ ಇಲಾಖೆ ಉಪನಿರ್ದೇಶಕ ಶಿವಕುಮಾರ್, ಸಹಾಯಕ ಸಂಖ್ಯಾ ಸಂಗ್ರಹಣಾಧಿಕಾರಿಗಳಾದ ಅಶ್ವತ್ಥಾಮ, ವೀಣಾ, ಚಂದ್ರಪ್ಪ, ಸಹಾಯಕ ನಿರ್ದೇಶಕರುಗಳಾದ ಶಶಿರೇಖಾ,ಯಾಸಿನ್ ಸೇರಿದಂತೆ ಇತರೆ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.


---

# ತಂತ್ರಜ್ಞಾನದ ಜೊತೆಗೇ ನಿಸರ್ಗದ ಅರಿವು ಮುಖ್ಯ

## ಕನಕದಾಸರು ಮುಂತಾದ ಸಾಧಕರ ಬದುಕನ್ನು ಮಕ್ಕಳಿಗೆ ದಾಟಿಸಬೇಕು: ಕೆವಿಪಿ

» ಬೆಂಗಳೂರು

ಮಕ್ಕಳನ್ನು ಮನೆಯ ಹೊರಗೆ ಆಟಕ್ಕೆ ಬಿಡುವುದರಿಂದಕ್ರಿಯಾಶೀಲತೆಅರಳುತ್ತದೆಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟರು. ಬಾಲ ಭವನ ಸೊಸೈಟಿ ಆಯೋಜಿಸಿದ್ದ ಕಲಾಶ್ರೀ ಆಯ್ಕೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಮಕ್ಕಳ ಮನಸ್ಸು ಯಾವಾಗಲೂ ಓಡಾಟ–ಕುಣಿದಾಟದೊಂದಿಗೆ ಅತ್ಯಂತ ಫಲವತ್ತಾಗಿ ಅರಳುತ್ತವೆ. ಹೀಗಾಗಿ ಮಕ್ಕಳನ್ನು ನಿರಂತರ ಚಟುವಟಿಕಿಯಿಂದಿಡಬೇಕು.ಮಣ್ಣಲ್ಲಿ ಆಡೋದು, ಕೆರೆಯಲ್ಲಿ ಈಜುತ್ತಾ ನಾವೆಲ್ಲಾ ಬೆಳೆದೆವು. ಈಗ ಸಿಟಿ ಮಕ್ಕಳಿಗೆ ಈ ಅವಕಾಶ ಇಲ್ಲದಂತಾಗಿದೆ. ಹಳ್ಳಿಗಳಲ್ಲಿ ಈ ಅವಕಾಶಗಳು ಇವೆ ಎಂದರು.



ಮಕ್ಕಳು ಸ್ವಾಭಾವಿಕವಾಗಿಯೇ ಚಟುವಟಿಕೆಯಿಂದ ಇರುತ್ತಾರೆ. ರೆಡಿ ಮೇಡ್ ಪ್ಲಾಸ್ಟಿಕ್ ಆಟದ ಸಾಮಾನುಗಳು ಮತ್ತು ಮೊಬೈಲ್ ಫೋನ್ ಮಕ್ಕಳ ಕ್ರಿಯಾಶೀಲತೆಯ ಶತ್ರುಗಳಾಗಿವೆ ಎಂದರು. ಮಕ್ಕಳನ್ನು ಪರಿಸರಕ್ಕೆ, ಆಟದ ಬಯಲಿಗೆ ಬಿಟ್ಟರೆ ಸಾಕು. ತಮಗೆ ಬೇಕಾದ ಆಟದ ಸಾಮಾಗ್ರಿಗಳನ್ನು ಕ್ರಿಯಾಶೀಲವಾಗಿ ಸೃಷ್ಟಿಸಿಕೊಳ್ಳುತ್ತಾರೆ.

ಪೋಷಕರು ತಮ್ಮ ಕೆಲಸದ ಒತ್ತಡ, ತಮ್ಮ ಹವ್ಯಾಸಗಳ ಒತ್ತಡವನ್ನು ಮಕ್ಕಳ ಮೇಲೆ ಹೇರುವುದರಿಂದ ಮಕ್ಕಳ ಕ್ರಿಯಾಶೀಲತೆ ಚಿವುಟಿದಂಗಾಗುತ್ತದೆ ಎನ್ನುವ ಎಚ್ಚರಿಕೆ ನೀಡಿದರು.ಇವತ್ತು ಜಗತ್ತು ತುಂಬಾ ಫಾಸ್ಟ್ ಆಗಿದೆ. ವೇಗವಾಗಿ ಬೆಳೆಯುತ್ತಿರುವ ಇಂದಿನ ಪ್ರಂಚದಲ್ಲಿ ಚಿಗುರೊಡೆಯುತ್ತಿರುವ ಮಕ್ಕಳನ್ನು ಕ್ರಿಯಾಶೀಲತೆ ಹಾಗೂ ಏಕಾಗ್ರತೆ ಮೂಡಿಸಲು ನಾವು ಪ್ರಯತ್ನಿಸಬೇಕು. ಕನಕದಾಸರು ಮತ್ತು ಇಂತಹ ಮಹಾನ್ ಸಾಧಕರು ತಮ್ಮ ಸಾಧನೆಯನ್ನು ಹೇಗೆ ಮಾಡಿದರು ಎನ್ನುವ ತಿಳಿವಳಿಕೆ ಎಲ್ಲರ ಬಾಳಿನಲ್ಲಿ ಸ್ಫೂರ್ತಿನ್ನು ತಂದುಕೊಡುತ್ತವೆ. ಬಾಲ್ಯದ ದಿನಗಳಲ್ಲೇ ಕ್ರಿಯಾಶೀಲತೆ ಕುರಿತು ನಾವು ಪೋಷಕರು ಅರಿವು ಬೆಳೆಸಿಕೊಳ್ಳಬೇಕು.

ಪುಟ ↘ 2

# ಡಿ.9ರಿಂದ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ

## ಉತ್ತರ ಕರ್ನಾಟಕದ ಪ್ರಗತಿಗೆ ಒತ್ತು: ಸ್ಪೀಕರ್

» ಚಿತ್ರದುರ್ಗ

ರಾಜ್ಯ ವಿಧಾನ ಮಂಡಲ ಚಳಿಗಾಲದ ಅಧಿವೇಶನ ಡಿಸೆಂಬರ್ 9 ರಿಂದ 19 ರವರೆಗೆ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯಲಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ.

ಮಂಗಳೂರಿನ ಸರ್ಕ್ಯೂಟ್ ಹೌಸ್‌ನಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಮಂಡ್ಯದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಇರುವುದರಿಂದ ಅಧಿವೇಶನವನ್ನು ಡಿಸೆಂಬರ್ 19ಕ್ಕೆ ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅಧಿವೇಶನ ಮುಂದುವರಿಸುವ ಕುರಿತು ಡಿಸೆಂಬರ್ 9ರಂದು ಸ್ಪೀಕರ್ ಅಧ್ಯಕ್ಷತೆಯಲ್ಲಿ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಕಾನೂನು ಸಚಿವರು ಎಲ್ಲಾ ರಾಜಕೀಯ ಮುಖಂಡರು, ವಿರೋಧ ಪಕ್ಷದ ಮುಖಂಡರು ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಅಧಿವೇಶನದಲ್ಲಿ ರಾಜ್ಯದ ಅಭಿವೃದ್ಧಿ ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತು ಚರ್ಚೆಯಾಗಬೇಕಿದೆ ಎಂದರು.

---

## ಪ್ರಮುಖ ಸುದ್ದಿ

ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಸಿಇಒ ಎಸ್.ಜೆ.ಸೋಮಶೇಖರ್ ತಾಕೀತು

# ಜಲಜೀವನ್ ಮಿಷನ್ ಕಾಮಗಾರಿ: ತುರ್ತಾಗಿ ಪೂರ್ಣಗೊಳಿಸಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಜಲಜೀವನ್ ಮಿಷಯ್ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ತುರ್ತಾಗಿ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಪ್ರಥಮಾದ್ಯತೆ ಮೇರೆಗೆ ಮನೆ ಮನೆಗೆ ಗಂಗೆ ಹಾಗೂ 128 ಶಾಲಾ ಮತ್ತು ಅಂಗನವಾಡಿ ಕೇಂದ್ರಗಳಿಗೆ ಹಾಗೂ 199 ಆಯುಷ್ಮಾನ್ ಆರೋಗ್ಯ ಕೇಂದ್ರಗಳಿಗೆ ಹತ್ತು ದಿನದೊಳಗೆ ನಳ ಸಂಪರ್ಕ ಕಲ್ಪಿಸಲು ಕ್ರಮವಹಿಸಬೇಕು ಎಂದು ತಿಳಿಸಿದರು.

ಮನೆ ಮನೆಗೆ ಗಂಗೆ ಕಾಮಗಾರಿಗಳಿಗೆ ಕಾರ್ಯದೇಶ ನೀಡಿದರೂ, ಇದುವರೆಗೂ ಪ್ರಾರಂಭಿಸದ ಗುತ್ತಿಗೆದಾರರ ವಿರುದ್ಧ ಟೆಂಡರ್ ನಿಯಮಾನಸಾರ ಕಟ್ಟುನಿಟ್ಟಿನ ಸೂಕ್ತ ಕ್ರಮ ಕೈಗೊಳ್ಳಲು ಅಭಿಯಂತರರಿಗೆ ಸೂಚನೆ ನೀಡಿದರು ಅವರು, ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ರಚಿಸಬೇಕು. ಗ್ರಾಮ ನೀರು ನೈರ್ಮಲ್ಯ ಸಮಿತಿಯ (ವಿಡಬ್ಲ್ಯೂಎಸ್‌ಸಿ) ಬ್ಯಾಂಕ್ ಖಾತೆಗಳನ್ನು ಕಡ್ಡಾಯವಾಗಿ ತೆರೆದಿರಬೇಕು ಎಂದು ಹೇಳಿದರು.

ಸ್ವಚ್ಛ ಭಾರತ್ ಯೋಜನೆಯಡಿ ಕೈಗೊಂಡಿರುವ ಬೂದು ನೀರು ನಿರ್ವಹಣೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಹಾಗೂ ಜಲಜೀವನ್ ಮಿಷನ್ ಯೋಜನೆ ಅಡಿಯಲ್ಲಿ ಕೈಗೊಂಡಿರುವ ಮಾಹಿತಿ ನಾಮಫಲಕಗಳನ್ನು ತುರ್ತಾಗಿ ಅಳವಡಿಸಿ, ಪ್ರಗತಿ ಸಾಧಿಸಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ನಿರೂಪಣಾಧಿಕಾರಿ ವಿಜಯ ಕುಮಾರ್, ಜಿಲ್ಲೆಯ ಆರು ತಾಲ್ಲೂಕುಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು, ಡಿಟಿಎಸ್‌ಯು ಸಮಾಲೋಚಕರು, ವಿಭಾಗ ಕಚೇರಿಯ ಶಾಖಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಇದ್ದರು.

## ಫಾಸ್ಟ್ ನ್ಯೂಸ್

### ತಂತ್ರಜ್ಞಾನದ ಜೊತೆಗೇ ನಿಸರ್ಗದ ಅರಿವು ಮುಖ್ಯ

» **ಮೊದಲ ಪುಟದಿಂದ**

ಬಳಿಕ ಮಕ್ಕಳಲ್ಲಿ ಮೂಡಿಸಬೇಕಾಗಿದೆ ಎಂದರು. ಇವೆಲ್ಲದರ ಒಟ್ಟು ಪರಿಣಾಮವಾಗಿ ಇಂದು ವೃದ್ಧಾಶ್ರಮಗಳು ಹೆಚ್ಚಾಗುತ್ತಿವೆ. ಮಕ್ಕಳು ಬೆಳೆದಂತೆ ಕೇವಲ ಯಾಂತ್ರಿಕವಾಗಿ ಬದುಕು ರೂಪಿಸಿಕೊಂಡು ಪೋಷಕರನ್ನು ನಿರ್ಲಕ್ಷಿಸುವುದು ಹೆಚ್ಚಾಗುತ್ತಿದೆ. ಇದರಿಂದ ವೃದ್ಧಾಶ್ರಮಗಳೂ ಹೆಚ್ಚುತ್ತಿವೆ ಎಂದರು. ಮಕ್ಕಳ ಕಲ್ಪನಾಶಕ್ತಿ ಗರಿಗೆದರುವುದಕ್ಕಾಗಿ , ಅವರನ್ನು ಹೇಗೆ ಕ್ರಿಯಾಶೀಲರಾಗುವಂತೆ ಪ್ರೋತ್ಸಾಹಿಸಲು ಪಾಲಕರಿಗೆ ಮಾರ್ಗದರ್ಶನ ನೀಡಲು ಬಾಲ ಭವನ ಇದೆ. ಬಾಲ ಭವನದ ಅಧ್ಯಕ್ಷರಾದ ನಾಯ್ಡು ಅವರಿದ್ದಾರೆ ಎಂದರು. ಬಾಲ ಭವನದ ಅಧ್ಯಕ್ಷರಾದ ಬಿ.ಆರ್.ನಾಯ್ಡು ಕಾರ್ಯದರ್ಶಿ ನಿಶ್ಚಿಲ್, ಆಡಳಿತಾಧಿಕಾರಿ ವಿಜಯಲಕ್ಷ್ಮಿ ಅವರು ಉಪಸ್ಥಿತರಿದ್ದರು

### ಹೊಸದುರ್ಗ ಸೇರಿದಂತೆ ಹಲವೆಡೆ ಇಂದು ವಿದ್ಯುತ್ ವ್ಯತ್ಯಯ

» **ಹೊಸದುರ್ಗ**

ತಾಲೂಕಿನ ಮಧುರೆ 220/66 ಕೆ.ವಿ ವಿದ್ಯುತ್ ಕೇಂದ್ರದಲ್ಲಿ ನಿರ್ವಹಣಾ ಕಾರ್ಯ ನಿರ್ವಹಿಸುತ್ತಿರುವುದರಿಂದ ನ.29 ರಂದು ಶುಕ್ರವಾರ ಬೆಳಿಗ್ಗೆ 10 ರಿಂದ ಸಂಜೆ 5 ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಹೊಸದುರ್ಗ ತಾಲೂಕಿನ ಹೊಸದುರ್ಗ ಪಟ್ಟಣ,ಕಸಬಾ ಮತ್ತು ಮಾಡದಕೆರೆ ಹೋಬಳಿಯ ಎಲಾ ಗ್ರಾಮಗಳ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಐಪಿ ಮತ್ತು ಲೈಟಿಂಗ್ ಸ್ಥಾವರಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಕಿರಣ್‌ರೆಡ್ಡಿ ಕೆ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪೋಷಕತ್ವದಡಿ ಮಕ್ಕಳನ್ನು ಪಡೆಯಲು ಅರ್ಜಿ ಆಹ್ವಾನ

» **ದಾವಣಗೆರೆ**

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಂಗ ಸಂಸ್ಥೆಗಳಾದ ಬಾಲಕರ ಸರ್ಕಾರಿ ಬಾಲ ಮಂದಿರ, ಬಾಲಕಿಯರ ಸರ್ಕಾರಿ ಬಾಲ ಮಂದಿರ ಹಾಗೂ ಅನುದಾನ ಸಹಿತ, ರಹಿತ, ಸರ್ಕಾರಿ, ಖಾಸಗಿ ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದೀರ್ಘಕಾಲಗಳಿಂದ ಪೋಷಕರ, ಕುಟುಂಬದ ಹಾರೈಕೆಯಿಂದ ವಂಚನೆಗೆ ಒಳಗಾದ 6 ರಿಂದ 18 ವರ್ಷದ ಒಳಗಿನ ಹೆಣ್ಣು ಹಾಗೂ ಗಂಡು ಮಕ್ಕಳಿಗೆ ತಾತ್ಕಾಲಿಕವಾದ, ಶಾಶ್ವತವಾದ ಪರ್ಯಾಯ ಕೌಟುಂಬಿಕ ವ್ಯವಸ್ಥೆಯನ್ನು ಸಾಮಾಜಿಕವಾಗಿ ಆರ್ಥಿಕವಾಗಿ ಸದೃಢವಾಗಿರುವ ಕುಟುಂಬದ ಪೋಷಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಬಾಲ ಭವನ ಕಟ್ಟಡ ಜಿ.ಹೆಚ್ ಪಟೇಲ್ ಬಡಾವಣೆ, ನಾಗನೂರ ರಸ್ತೆ, ದಾವಣಗೆರೆ ದೂ ಸಂ: 08192-222701 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

### ಮಾದಕ ವಸ್ತುವಿನ ನಿಯಂತ್ರಣ ಕುರಿತು ಶಾಲಾ ಶಿಕ್ಷಕರಿಗೆ ಒಂದು ದಿನದ ಜಾಗೃತಿ ಕಾರ್ಯಕ್ರಮ




» **ದಾವಣಗೆರೆ**

ರಾಜ್ಯ ಮಟ್ಟದ ಸಮನ್ವಯ ಸಂಸ್ಥೆ, ಕರ್ನಾಟಕ ನಶಾ ಮುಕ್ತ ಭಾರತ ಅಭಿಯಾನ ಇವರ ಸಂಯುಕ್ತಾಶ್ರಯದಲ್ಲಿ ದೊಡ್ಡಬಾತಿ ತಪೋವನ ಕೇಂದ್ರ ಕಚೇರಿಯಲ್ಲಿ ಶಾಲಾ ಶಿಕ್ಷಕರಿಗೆ ಮಾದಕ ವಸ್ತುವಿನ ನಿಯಂತ್ರಣ ಕುರಿತು ಒಂದು ದಿನದ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ತಪೋವನ ಅಯುರ್ವೇದಿಕ್ ಮತ್ತು ನ್ಯಾಚುರೊಪತಿ ಕಾಲೇಜ್ ಮತ್ತು ಆಸ್ಪತ್ರೆಯ ಪ್ರಿನ್ಸಿಪಾಲರಾದ ಡಾ.ಅಶ್ವಿನಿ ಉದ್ಘಾಟನೆ ಮಾಡಿದರು. ರಾಜ್ಯ ಮಟ್ಟದ ಎಸ್.ಎಲ್.ಸಿ.ಎ ಸಂಯೋಜಕರಾದ ಶೈಲಾಶ್ರೀ ಮಾದಕ ವಸ್ತುಗಳ ಅಪಾಯ ಮತ್ತು ನಿಯಂತ್ರಣ ಕುರಿತು ಮಾಹಿತಿ ನೀಡಿದರು. ಶಿಕ್ಷಣ ಇಲಾಖೆಯ ಶಿಕ್ಷಕರ ವಿಜಯ ಕುಮಾರ್ ಮತ್ತು ಮಹಮ್ಮದ್ ಹುಸೇನ್ ಪೀರ್ ರವರು ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಾಕ್ರಮದಲ್ಲಿ ವಿದ್ಯಾರ್ಥಿಗಳಿಂದ ಮಾದಕ ವಸ್ತುಗಳ ವಿರೋಧದ ಕುರಿತು ಕಿರು-ನಾಟಕ ಪ್ರದರ್ಶನ ಮಾಡಿದರು. ಭಾಗವಹಿಸಿದವರಿಗೆ ಪ್ರಮಾಣಪತ್ರ ವಿತರಣೆ ಮಾಡಲಾಯಿತು, ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಡಾ.ಶಿಲ್ಪಾ ಮತ್ತು ಡಾ.ಅನಿತಾ , ಜಗದೀಶ್, ದಾವಣಗೆರೆ ಜಿಲ್ಲೆಯ 100 ಕ್ಕೂ ಅಧಿಕ ಶಾಲಾ ಶಿಕ್ಷಕರು ಹಾಗೂ ಎಸ್.ಎಲ್.ಸಿ.ಎ ಸಿಬ್ಬಂದಿಗಳು ಹಾಗೂ ಇನ್ನಿತರರು ಬಾಗವಹಿಸಿದ್ದರು.

---

#### ನಾಗರಿಕ ನೋಂದಣಿ ಪದ್ಧತಿಯ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# 100% ಜನನ-ಮರಣ ನೋಂದಣಿಗೆ ಕ್ರಮ ವಹಿಸಿ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ಶೇ.100 ರಷ್ಟು ಜನನ-ಮರಣ ನೋಂದಣಿ ಪ್ರಕ್ರಿಯೆ ಸಮರ್ಪಕವಾಗಿ ಕೈಗೊಳ್ಳಲು ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಮಟ್ಟದ ನಾಗರಿಕ ನೋಂದಣಿ ಪದ್ಧತಿಯ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಯೋಜನೆ, ಕಾರ್ಯಕ್ರಮ ರೂಪಿಸಲು ದತ್ತಾಂಶಗಳು ಬಹಳ ಮುಖ್ಯ. ನಿಖರವಾದ ಅಂಕಿ-ಅಂಶಗಳು ಇಲ್ಲದಿದ್ದರೆ ಯೋಜನೆ ರೂಪಿಸಲು ಕಷ್ಟ ಸಾಧ್ಯ. ಈ ನಿಟ್ಟಿನಲ್ಲಿ ಜನನ-ಮರಣ ಶೇ.100ರಷ್ಟು ನೋಂದಣಿಗಾಗಿ ವಿವಿಧ ಇಲಾಖೆಗಳ ನೆರವು ಅಗತ್ಯವಾಗಿದ್ದು, ಜಿಲ್ಲೆಯ ಎಲ್ಲಾ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು, ಆಶಾ ಕಾರ್ಯಕರ್ತರು, ವೈದ್ಯಾಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು, ಬಿಲ್ ಕಲೆಕ್ಟರ್, ವಾಟರ್ ಮ್ಯಾನ್, ಗ್ರಾಮ ಪಂಚಾಯಿತಿ ಸದಸ್ಯರು ಜನನ-ಮರಣ ನೋಂದಣಿ ಕಾರ್ಯದಲ್ಲಿ ಕಡ್ಡಾಯವಾಗಿ ಭಾಗವಹಿಸಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಜನನ-ಮರಣ ನೋಂದಣಿಗೆ ಸಂಬಂಧಿಸಿದಂತೆ ಸುತ್ತೋಲೆಗಳ ಕಡತ, ಪ್ರಮಾಣ ಪತ್ರ ವಿತರಣೆ, ವಿತರಣೆ ವಹಿ ಸಮರ್ಪಕವಾಗಿ ನಿರ್ವಹಿಸಬೇಕು ಹಾಗೂ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಆರೋಗ್ಯ ಇಲಾಖೆಯ ಜನನ-ಮರಣ ನೋಂದಣಿ ಮತ್ತು ಉಪ ನೋಂದಣಿ ಘಟಕಗಳ ನಾಮಫಲಕಗಳನ್ನು ಅಳವಡಿಸಬೇಕು ಎಂದು ಹೇಳಿದರು.

ಪ್ರತಿ ತಿಂಗಳು ಸಭೆ ನಡೆಸಿ: ತಹಶೀಲ್ದಾರ್‌ಗಳ ಅಧ್ಯಕ್ಷತೆಯಲ್ಲಿ ನಡೆಯುವ ತಾಲ್ಲೂಕು ಮಟ್ಟದ ನಾಗರೀಕ ನೋಂದಣಿ ಪದ್ಧತಿಯ ಸಮನ್ವಯ ಸಮಿತಿ ಸಭೆಗಳನ್ನು ಪ್ರತಿ ತಿಂಗಳು ಕಡ್ಡಾಯವಾಗಿ ನಡೆಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು.

2024 ರ ಜನವರಿಯಿಂದ ಅಕ್ಟೋಬರ್‌ವರೆಗೆ ಆರು ತಾಲ್ಲೂಕುಗಳಿಂದ ತಾಲ್ಲೂಕು ಮಟ್ಟದ 60 ನಾಗರಿಕ ನೋಂದಣಿ ಪದ್ಧತಿಯ ಸಮನ್ವಯ ಸಮಿತಿ ಸಭೆಗಳನ್ನು ನಡೆಸಬೇಕಾಗಿದ್ದು, ಇದರಲ್ಲಿ ಚಳ್ಳಕೆರೆ ತಾಲ್ಲೂಕಿನಲ್ಲಿ 02, ಚಿತ್ರದುರ್ಗ 05, ಹಿರಿಯೂರು 01, ಹೊಳಲ್ಕೆರೆ 06, ಹೊಸದುರ್ಗ 02 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 04 ಸಭೆ ಸೇರಿದಂತೆ ಒಟ್ಟು 20 ಸಭೆಗಳನ್ನು ಕೈಗೊಂಡು, ಸಭಾ ನಡಾವಳಿ ಸಲ್ಲಿಸಲಾಗಿದೆ ಎಂದು ಜಿಲ್ಲಾ ಸಾಂಖ್ಯಿಕ ಅಧಿಕಾರಿ ರವಿಕುಮಾರ್ ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆ ನಡೆಸದ ಅಧಿಕಾರಿಗಳಿಗೆ ನೋಟಿಸ್ ನೀಡಿ ಎಂದು ತಾಕೀತು ಮಾಡಿದರು.

ಮರಣ ಕಾರಣ ವೈದ್ಯಕೀಯ ಪ್ರಮಾಣ ಪತ್ರ ನೋಂದಣಿ ಕಡ್ಡಾಯ: ಸರ್ಕಾರಿ ಮತ್ತು ಖಾಸಗಿ ಆರೋಗ್ಯ ಸಂಸ್ಥೆಗಳಲ್ಲಿ ಮರಣ ಸಂಭವಿಸಿದಾಗ ಮರಣ ಕಾರಣ ವೈದ್ಯಕೀಯ ಪ್ರಮಾಣ ಪತ್ರ ನಮೂನೆ 4ಎ ನಲ್ಲಿ ದಾಖಲಿಸಬೇಕು. ಇ-ಜನ್ಮ ತಂತ್ರಾಂಶದಲ್ಲಿ ಮರಣ ನೋಂದಣಿ ಮಾಡುವಾಗ ಮರಣ ಕಾರಣ ವೈದ್ಯಕೀಯ ಪ್ರಮಾಣ ಪತ್ರವನ್ನು ಅಪ್‌ಲೋಡ್ ಮಾಡಬೇಕು ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ರವಿಕುಮಾರ್ ತಿಳಿಸಿದರು.

ರೋಗಿಯ ಕೊನೆಯ ಕ್ಷಣದವರೆಗೂ ಉಪಚರಿಸಿದ ವೈದ್ಯರು, ರೋಗಿಗೆ ಸಂಬಂಧಿಸಿದ ಮರಣ ಕಾರಣವನ್ನು ನಮೂನೆ-4 ರ ಪ್ರಮಾಣ ಪತ್ರವನ್ನು ಭರ್ತಿ ಮಾಡಬೇಕು. ಪ್ರತಿ ತಿಂಗಳು ಮರಣ ವೈದ್ಯಕೀಯ ಪ್ರಮಾಣಪತ್ರವನ್ನು ಜನನ ಮರಣ ಮುಖ್ಯ ನೋಂದಣಾಧಿಕಾರಿಗೆ ಸಲ್ಲಿಸಬೇಕು. ಪ್ರತಿಯನ್ನು ಜಿಲ್ಲಾ ಸಂಗ್ರಹಣಾಧಿಕಾರಿಗಳಿಗೆ ಸಲ್ಲಿಸುವಂತೆ ತಿಳಿಸಿದ ಅವರು, ಯಾವುದೇ ಜನನ-ಮರಣ ನೋಂದಣಿ ಕೈಬಿಟ್ಟು ಹೋಗದಂತೆ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಬಿ.ವಿ. ಗಿರೀಶ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

---

# ಲಿಂಗಾಧಾರಿತ ದೌರ್ಜನ್ಯ ಕುರಿತು ಅರಿವು

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಗ್ರಾಮ ಪಂಚಾಯಿತಿ ಆವರಣದಲ್ಲಿರುವ ಕೂಸಿನ ಮನೆ ಅಂಗನವಾಡಿ ಕೇಂದ್ರದಲ್ಲಿ ಬುಧವಾರ ಲಿಂಗಾಧಾರಿತ ದೌರ್ಜನ್ಯ ನಿವಾರಿಸುವ ಅರಿವು ಶಿಬಿರ ನಡೆಯಿತು.

"ಇಂಟರ್ ನ್ಯಾಷನಲ್ ಆಫ್ ದಿ ಎಲಿಮಿನೇಷನ್ ಆಫ್ ದಿ ವಯಲೆನ್ಸ್ ಏವರೆಸ್ಟ್ ವುಮೆನ್ ಅಂಡ್ ಇಂಟರ್ ನ್ಯಾಷನಲ್ ವುಮೆನ್ ರೈಟ್ಸ್ ಡೇ" 16 ದಿನಗಳ ವಿಶೇಷ ಜಾಗೃತಿ ಅಭಿಯಾನದ ಅಂಗವಾಗಿ ಭರಮಸಾಗರ ಯೋಜನೆಯ ಹಿರೇಗುಂಟನೂರು-1 ಮತ್ತು 2 ವೃತ್ತದಅಂಗನವಾಡಿಕಾರ್ಯಕರ್ತೆಯರಿಗೆಒಂದು ದಿನದ ಲಿಂಗಾಧಾರಿತ ದೌರ್ಜನ್ಯ ನಿವಾರಿಸುವ ಕುರಿತು ಅರಿವು ಮೂಡಿಸಲಾಯಿತು.



ಅಂಗನವಾಡಿ ಕಾರ್ಯಕರ್ತರಿಗೆ ಮತ್ತು ಸ್ಥಳೀಯ ಮಹಿಳೆಯರಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಮಹಿಳಾ ಆಧಾರಿತ ಯೋಜನೆಗಳು ಹಾಗೂ ಅವುಗಳ ಪ್ರಯೋಜನಗಳು ಬಗ್ಗೆ ಮತ್ತು ಸಾಂತ್ವಾನ ಕೇಂದ್ರಗಳು, ಸಖಿ ಒನ್ ಸ್ಟಾಪ್ ಸೆಂಟರ್‌ಗಳ ಉಪಯೋಗಗಳ ಬಗ್ಗೆ ಮಹಿಳಾ ಸಹಾಯವಾಣಿ ಸಂಖ್ಯೆ 181, ತುರ್ತು ಸಹಾಯವಾಣಿ ಸಂಖ್ಯೆ 112, ಮಕ್ಕಳ ಸಹಾಯವಾಣಿ ಸಂಖ್ಯೆ 1058, ಮಹಿಳಾ ಸುರಕ್ಷತೆ ಹಾಗೂ ಮಹಿಳೆಯರಿಗಾಗಿ ಇರುವ ಕಾಯ್ದೆ ಕಾನೂನುಗಳು ಸೇರಿದಂತೆ ಈ ಎಲ್ಲಾ ಪ್ರಯೋಜನಗಳನ್ನು ಪಡೆದುಕೊಳ್ಳುವಂತೆ ಮಹಿಳೆಯರಿಗೆ ಉತ್ತೇಜಿಸಲಾಯಿತು. ಅಂಗನವಾಡಿ ಕಾರ್ಯಕರ್ತರಿಗೆ ತಮ್ಮ ತಮ್ಮ ವ್ಯಾಪ್ತಿಯಲ್ಲಿ ಅರಿವು ಜಾಗೃತಿ ಮಾಡುವಂತೆ ಸೂಚಿಸಲಾಯಿತು.

ಕಾರ್ಯಕ್ರಮದಲ್ಲಿ ಸಿರಿಗೆರೆ ಗ್ರಾಮ ಪಂಚಾಯಿತಿ ಸದಸ್ಯೆ ಹಾಲಮ್ಮ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹೇಮಾವತಿ, ಹಿರೇಗುಂಟನೂರು ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ಗಂಗಮ್ಮ, ವೀರಮ್ಮ, ವೃತ್ತ ಮೇಲ್ವಿಚಾರಕಿ ಮಂಜುಳಾ, ಅಂಗನವಾಡಿ ಕಾರ್ಯಕರ್ತರು, ಗ್ರಾಮಸ್ಥರು ಇದ್ದರು.

## ಚಿತ್ರದುರ್ಗ ನಗರಸಭೆ ಉಪಚುನಾವಣೆ: ಕಾಂಗ್ರೆಸ್ ಅಭ್ಯರ್ಥಿ ಗೆಲುವು; ಸನ್ಮಾನ



» **ಚಿತ್ರದುರ್ಗ**

ನಗರಸಭೆ ಹದಿನೈದನೆ ವಾರ್ಡಿನ ಸದಸ್ಯ ಸ್ಥಾನಕ್ಕೆ ಕಳೆದ 23 ರಂದು ನಡೆದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ ಜಯಶಾಲಿಯಾಗಿರುವ ನರಸಿಂಹಮೂರ್ತಿ ಈ. ಇವರಿಗೆ ಕಾಂಗ್ರೆಸ್ ಕಚೇರಿಯಲ್ಲಿ ಪಕ್ಷದ ಶಾಲು ಹಾಕಿ ಅಭಿನಂದಿಸಿ ನಂತರ ಒನಕೆ ಓಬವ್ವ ವೃತ್ತದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಲಾಯಿತು. 1330 ಮತಗಳನ್ನು ಪಡೆದಿರುವ ನರಸಿಂಹಮೂರ್ತಿ ಈ. ಎದುರಾಳಿ ಎ.ಐ.ಎಂ.ಐ.ಎಂ. ಪಕ್ಷದ ಸೈಯದ್ ಜಿಯಾವುಲ್ಲಾರವರನ್ನು 1018 ಮತಗಳ ಅಂತರದಿಂದ ಸೋಲಿಸಿ ಜಯಗಳಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಕೇವಲ ನಗರಸಭೆ ಹದಿನೈದನೆ ವಾರ್ಡಿಗೆ ಮಾತ್ರ ಸೀಮಿತವಾಗಿರುವುದು ಬೇಡ. ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿದ್ದುಕೊಂಡು ಪಕ್ಷ ಸಂಘಟನೆಗೂ ಹೆಚ್ಚಿನ ಒತ್ತು ನೀಡುವಂತೆ ನರಸಿಂಹಮೂರ್ತಿಗೆ ಸೂಚಿಸಿದರು.ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್ ನಾಗರಾಜ್ ಪೈಲೆಟ್, ನಾಗರಾಜ್ ಜಾನ್ಹವಿ, ನಗರಸಭೆ ನಾಮನಿರ್ದೇಶಕ ಸದಸ್ಯ ಹೆಚ್.ಶಬ್ಬೀರ್‌ಭಾಷ ಹಾಜರಿದ್ದರು.

---

# ಭ್ರಷ್ಟಾಚಾರ ಈ ರಾಜರೋಷವಾಗಿ ನಡೆಯುತ್ತಿದೆ

» **ಚಿತ್ರದುರ್ಗ**

ಭ್ರಷ್ಠಾಚಾರ ಎನ್ನುವುದು ಇಂದಿನಿಂದಲ್ಲ ಹಿಂದಿನಿಂದಲೂ ಇದೆ ಆದರೆ ಅಗ ಕದ್ದು ಮುಚ್ಚಿ ನಡೆಯುತ್ತಿತ್ತು ಆದರೆ ಈಗ ರಾಜರೋಷವಾಗಿ ನಡೆಯುತ್ತಿದೆ ಇದಕ್ಕೆ ತಡೆಯನ್ನು ಹಾಕಬೇಕಿದೆ. ಇದನ್ನು ನಿಲ್ಲಿಸುವುದಕ್ಕೆ ಆಗುವುದಿಲ್ಲ ಆದರೆ ಎಲ್ಲರು ಸೇರಿ ಇದನ್ನು ಕಡಿಮೆ ಮಾಡುವ ಕಾರ್ಯವನ್ನು ಮಾಡಬೇಕಿದೆ ಎಂದು ಆಮ್ ಆದ್ಮಿ ಪಾರ್ಟಿಯ ರಾಜ್ಯಾಧ್ಯಕ್ಷರಾದ ಮುಖ್ಯಮಂತ್ರಿ ಚಂದ್ರು ಕರೆ ನೀಡಿದರು.

ಭ್ರಷ್ಠಾಚಾರ ಮುಕ್ತ ಚಿತ್ರದುರ್ಗವನ್ನಾಗಿ ಮಾಡುವ ಸಲುವಾಗಿ ಆಮ್ ಆದ್ಮಿ ಪಾರ್ಟಿ ಚಿತ್ರದುರ್ಗ ಘಟಕದ ವತಿಯಿಂದ ನಡೆಯುತ್ತಿರುವ ಉಪವಾಸ ಸತ್ಯಾಗ್ರಹ ಇಂದಿಗೆ ಮೂರನೇ ದಿನಕ್ಕೆ ಕಾಲಿಟಿದ್ದು, ಇದರಲ್ಲಿ ಭಾಗವ ಹಿಸಿದ್ದ ಅವರು ಮಾತನಾಡಿ, ದೇಶವೂ ಸಹಾ ಭ್ರಷ್ಠ ಮುಕ್ತವಾದ ದೇಶವಾಗಬೇಕಿದೆ, ಇದಕ್ಕೆ ಎಲ್ಲರು ಸಹಾ ಸಹಕಾರವನ್ನು ನೀಡಬೇಕಿದೆ. ಚಿತ್ರದುರ್ಗ ಘಟಕ ನಡೆಸುವ ಈ ಕಾರ್ಯಕ್ಕೆ ನಮ್ಮ ಪೂರ್ಣವಾದ ಬೆಂಬಲ ಇದೆ, ಇದನ್ನು ಎಲ್ಲರು ಸಹಾ ಬೆಂಬಲಿಸಬೇಕಿದೆ. ಭ್ರಷ್ಠಾಚಾರ ಹೆಚ್ಚಿನ ರೀತಿಯಲ್ಲಿ ತಾಂಡವಾಡುತ್ತಿದೆ ಇದನ್ನು ತಪ್ಪಿಸಲು ಸಾಧ್ಯವಿಲ್ಲ ಆದರೆ ಕಡಿಮೆ ಮಾಡಬಹುದಾಗಿದೆ ಇದಕ್ಕೆ ಎಲ್ಲರೂ ಹೆಚ್ಚಿನ ರೀತಿಯಲ್ಲಿ ಸಹಕರಿಸಬೇಕಿದೆ. ಇದು ನಡೆದಿರುವುದು ಸಾಂಕೇತಿಕವಾಗಿದೆ ಮುಂದಿನ ದಿನಮಾನದಲ್ಲಿ ಇದರ ಹೋರಾಟವನ್ನು ರಾಜ್ಯಾದ್ಯಾಂದತ ನಡೆಸಲಾಗುವುದು ಎಂದರು.




---

## ಪ್ರಮುಖ ಸುದ್ದಿ

#### ರಾಂಪುರ: ಕೇಂದ್ರ ಸರ್ಕಾರದ ಯೋಜನೆಗಳ ಮಾಹಿತಿ ನೀಡುವ ಜಾಗೃತಿ ಕಾರ್ಯಕ್ರಮ

# ಸರ್ಕಾರದ ಯೋಜನೆ ಸದ್ಬಳಕೆ ಮಾಡಿಕೊಳ್ಳಿ: ಎಚ್.ಎ.ರಾಜು






» **ಚಿತ್ರದುರ್ಗ**

ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಲ್ಲಿ ಹಲವಾರು ಜನಪರ ಯೋಜನೆಗಳನ್ನು ಪರಿಚಯಿಸಿದ್ದು, ಜನಸಾಮಾನ್ಯರು ಈ ಎಲ್ಲಾ ಯೋಜನೆಗಳ ಅನುಕೂಲತೆ ಪಡೆದುಕೊಳ್ಳಬೇಕು ಎಂದು ರಾಂಪುರ ಎಸ್‌ಪಿಎಸ್‌ಆರ್ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಅಧ್ಯಕ್ಷರಾದ ಎಚ್.ಎ. ರಾಜು ಹೇಳಿದರು.

ಮೊಳಕಾಲ್ಮುರು ತಾಲ್ಲೂಕಿನ ರಾಂಪುರ ಎಸ್‌ಪಿಎಸ್‌ಆರ್ ಪದವಿ ಪೂರ್ವ ಕಾಲೇಜಿನಲ್ಲಿ ಬಳ್ಳಾರಿಯ ಕೇಂದ್ರ ಸಂವಹನ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಕೇಂದ್ರ ಸರ್ಕಾರದ ಯೋಜನೆಗಳ ಮಾಹಿತಿ ನೀಡುವ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರದ ಜನಪರ ಯೋಜನೆಗಳು ಗ್ರಾಮೀಣ ಭಾಗಗಳಿಗೆ ತಲುಪಿಸುವ ಅಗತ್ಯವಿದೆ. ಹಳ್ಳಿಗಳ ಜನರು ಕೇಂದ್ರ ಸರ್ಕಾರದ ಕೃಷಿ ಪಿಂಚಣಿ ಹಾಗೂ ವಿಮಾ ಯೋಜನೆಗಳ ಅನುಕೂಲತೆಗಳನ್ನು ಪಡೆಯಬೇಕು. ಆರೋಗ್ಯ ರಕ್ಷಣೆಗಾಗಿ ಪರಿಚಯಿಸುವ ಆಯುಷ್ಮಾನ್ ಭಾರತ್ ಯೋಜನಾ ಅನುಕೂಲವನ್ನು 70 ವರ್ಷದ ವಯೋಮಾನದವರಿಗೂ ವಿಸ್ತರಿಸಲಾಗಿದೆ. ಮಹಿಳೆಯರು ಹಾಗೂ ಮಕ್ಕಳಿಗಾಗಿ ಹಲವಾರು ಉತ್ತಮ ಯೋಜನೆಗಳಿವೆ ಎಂದರು.

ಕೆ.ಪಿ.ಟಿ.ಸಿ.ಎಲ್ ಸಹಾಯಕ ಅಭಿಯಂತರ ಹನುಮಂತ್ ರೆಡ್ಡಿ ಮಾತನಾಡಿ, ಸೂರ್ಯಘರ್ ಯೋಜನೆ ಅಡಿ ಗ್ರಾಮೀಣ ಭಾಗಗಳ ಜನರು ಸೋಲಾರ್ ಅಳವಡಿಸಿ ಉಳಿತಾಯ ಮಾಡಬಹುದು ಅವರು ಹೇಳಿದರು.

ರಾಂಪುರ ಪದವಿ ಪೂರ್ವ ಕಾಲೇಜಿನ ಪೂರ್ವ ಕಾಲೇಜಿನ ಪ್ರಾಚಾರ್ಯರು ಹಾಗೂ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಡಾ.ತಿಮ್ಮಣ್ಣ ಮಾತನಾಡಿ, ಸರ್ಕಾರದ ಪ್ರಮುಖ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಪ್ರೌಢಶಾಲಾ ವಿಭಾಗದ ಉಪ ಪ್ರಾಂಶುಪಾಲರಾದ ಗುರುಸಿದ್ದಪ್ಪ ಅವರು ಸಂವಿಧಾನ ಮತ್ತು ರಾಷ್ಟ್ರೀಐ ಏಕತಾ ದಿವಸ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಿದರು. ಕಲಾ ತಂಡದವರಿಂದ ಜಾನಪದ ಗೀತೆಗಳು, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗಾಗಿ ವಿವಿಧ ಸ್ಪರ್ಧೆಗಳು ನಡೆದವು. ವಿಜೇತರಾದ ವಿದ್ಯಾರ್ಥಿಗಳಿಗೆ ಗಣ್ಯರಿಂದ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಬೋರಯ್ಯ, ಸುಂದರಮೂರ್ತಿ, ಭೀಮಸೇನಾ, ವಿಶಾಲಾಕ್ಷ ಮತ್ತಿತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ತಾತ್ಕಾಲಿಕ ತಜ್ಞ ವೈದ್ಯರ ಹುದ್ದೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನ ಹಾಗೂ ಪಿಎಂ ಭೀಮ್ ಕಾರ್ಯಕ್ರಮದಡಿ ಆಯುಷ್ಮತಿ ಕ್ಲಿನಿಕ್‌ಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ತಾತ್ಕಾಲಿಕವಾಗಿ ತಜ್ಞ ವೈದ್ಯರ ಅಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಹುದ್ದೆಯ ವಿವರ : ಸ್ತ್ರೀ ರೋಗ ತಜ್ಞರು 4, ಮೂಳೆ ಮತ್ತು ಕೀಲು ತಜ್ಞರು 4 ಶಸ್ತ್ರ ಚಿಕಿತ್ಸಾ ತಜ್ಞರು 4 ಮಕ್ಕಳ ತಜ್ಞರು 4, ಚರ್ಮ ರೋಗ ತಜ್ಞರು 4, ಫಿಜಿಜಿಯನ್ 4, ಮನರೋಗ ತಜ್ಞರು 4, ಕಿವಿ, ಮೂಗು ಮತ್ತು ಗಂಟಲು ತಜ್ಞರು 4. ವಿದ್ಯಾರ್ಹತೆ : ಎಂ.ಬಿ.ಬಿ.ಎಸ್. ಉತ್ತೀರ್ಣರಾಗಿರಬೇಕು, ಸ್ನಾತಕೋತ್ತರ ಪದವಿ ಹೊಂದಿರಬೇಕು, ಕಡ್ಡಾಯವಾಗಿ ಇಂಟರ್ನ್‌ಶಿಪ್ ಪೂರೈಸಿರಬೇಕು ಹಾಗೂ ಕೆ.ಎಮ್.ಸಿ.ಯ ನೊಂದಣಿಯನ್ನು ಹೊಂದಿರತಕ್ಕದು. ಮಾನ್ಯತೆಪಡೆದ ವಿದ್ಯಾಲಯಯದಿಂದ ಕಾನ್ವಕೇಷನ್, ಪದವಿ ಪ್ರಮಾಣಪತ್ರ, ಪಿ.ಜಿ ಪ್ರಮಾಣಪತ್ರ ಹೊಂದಿರಬೇಕು. ವಯೋಮಿತಿ ಗರಿಷ್ಠ 70 ವರ್ಷ ಆಗಿರಬೇಕು. ಆಸಕ್ತ ಅಭ್ಯರ್ಥಿಗಳು ಜಿಲ್ಲಾ ಆರೋಗ್ಯ ಮತ್ತು ಕು.ಕ. ಅಧಿಕಾರಿಗಳ ಕಛೇರಿ, ಸಮಯದಲ್ಲಿ ಬೆಳಗ್ಗೆ 10.00 ರಿಂದ ಸಂಜೆ 5.00 ಒಳಗೆ ಶ್ರೀರಾಮನಗರ ರಸ್ತೆ, ಎಸ್.ಎಸ್.ಆಸ್ಪತ್ರೆ ಹಿಂಭಾಗ, ಎನ್.ಸಿ.ಸಿ.ಕ್ಯಾಂಪ್ ಪಕ್ಕ, ದಾವಣಗೆರೆ ಇಲ್ಲಿ ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9341776436 ಗೆ ಸಂಪರ್ಕಿಸಬಹುದು.

### ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಎಸ್‌ಎಸ್‌ಪಿ ಪೋರ್ಟಲ್‌ನಲ್ಲಿ ಡಿ.ಬಿ.ಟಿ ಮುಖಾಂತರ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ttp://ssp.postmatric.karnataka.gov.in ಅರ್ಜಿ ಸಲ್ಲಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### 5ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

» ಶಿವಮೊಗ್ಗ

ಭಾರತ ಸರ್ಕಾರ, ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ರಾಷ್ಟ್ರೀಯ ಸೇವಾ ಯೋಜನೆ ಮತ್ತು ಸಹ್ಯಾದ್ರಿ ವಿಜ್ಞಾನ ಕಾಲೇಜು ಇವರುಗಳ ಸಹಯೋಗ ದೊಂದಿಗೆ ಸಹ್ಯಾದ್ರಿ ವಿಜ್ಞಾನ ಕಾಲೇಜು ಜ್ಯೂಬಿಲಿ ಸಭಾಂಗಣದಲ್ಲಿ ಡಿ. 05 ರಂದು ಜಿಲ್ಲಾ ಮಟ್ಟದ ಯುವಜನೋತ್ಸವದ ಕಾರ್ಯಕ್ರಮದಡಿಯಲ್ಲಿ ಯುವ ಕೃತಿ ಮತ್ತು ವಿಜ್ಞಾನ ಮೇಳವನ್ನು ಏರ್ಪಡಿಸಲಾಗಿದೆ. ಜಿಲ್ಲಾ ಮಟ್ಟದ ಯುವಜನೋತ್ಸವಕ್ಕೆ ಭಾಗವಹಿಸುವ ಯುವಕ, ಯುವತಿಯರು 15 ರಿಂದ 29 ವರ್ಷ ವಯೋಮಿತಿಗೆ ಒಳಪಟ್ಟಿರಬೇಕು. ವಿಜ್ಞಾನ ಮೇಳ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಆಧುನಿಕತೆ ಎಂಬ ಪರಿಕಲ್ಪನೆ ಹೊಂದಿದ್ದು, ತಂಡದ ಬಹುಮಾನ ಪ್ರಥಮ-7000/-, ದ್ವಿತೀಯ - 5000/- ಮತ್ತು ತೃತೀಯ-3000/- ನಗದು ಬಹುಮಾನ ನೀಡಲಾಗುವುದು. ವೈಯಕ್ತಿಕ ಬಹುಮಾನ 3000/-, ದ್ವಿತೀಯ- 2000/- ಮತ್ತು ತೃತೀಯ-1500/- ನಗದು ಬಹುಮಾನ ನೀಡಲಾಗುವುದು. ತಂಡದಲ್ಲಿ ಗರಿಷ್ಠ 5 ಜನ ಮತ್ತು ವೈಯಕ್ತಿಕ ಒಬ್ಬರು ಮಾತ್ರ ಭಾಗವಹಿಸಬಹುದು. ಆಧುನಿಕತೆಗೆ ಪ್ರಾಧಾನ್ಯತೆ ನೀಡಲಾಗುವುದು. ಸಕ್ರಿಯ ಮಾದರಿ ತಯಾರಿಕೆಯ ಪ್ರದರ್ಶನವಿರಬೇಕು. ನಿಷ್ಕ್ರಿಯ ಮಾದರಿ ತಯಾರಿಕೆಗೆ ಅವಕಾಶವಿಲ್ಲ. ಭಾಗವಹಿಸುವ ಸ್ಪರ್ಧಾಳುಗಳು ಅವಶ್ಯವಿರುವ ಅಗತ್ಯ ಸಾಮಗ್ರಿಗಳನ್ನು ತಾವೇ ತರಬೇಕು. ಯುವ ಕೃತಿ ವಿಭಾಗದಲ್ಲಿ ಗುಡಿಕೈಗಾರಿಕೆ ಕಲಾ ಪ್ರಕಾರ, ನೇಕಾರಿಕೆ/ಜವಳಿ, ಕೃಷಿ ಉತ್ಪನ್ನಗಳನ್ನು ತಯಾರಿಸಬೇಕು. ಪ್ರತಿಯೊಂದರಲ್ಲೂ 7 ಜನ ಭಾಗವಹಿಸಬಹುದು. ಸ್ಪರ್ಧಾಳುಗಳು ಅಗತ್ಯ ಸಾಮಗ್ರಿಗಳನ್ನು ತಾವೇ ತರಬೇಕು. ಭಾಗವಹಿಸುವವರಿಗೆಗೌರವಧನನೀಡಲಾಗುವುದು. ಆಸಕ್ತರು ಸ್ಪರ್ಧೆಯಲ್ಲಿ ಭಾಗವಹಿಸುವ ಬಗ್ಗೆ ಮಾಹಿತಿಯನ್ನು ಡಿ.3 ರೊಳಗಾಗಿ ನೀಡಬೇಕು ಮತ್ತು ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ಅಥವಾ ಯುವ ಕೇಂದ್ರ ಕಚೇರಿ ಅಥವಾ ದೂರವಾಣಿ ಸಂಖ್ಯೆ 08182 220883 9961332968, 9900280416 ಸಂಪರ್ಕಿಸುವುದು.

### ಬ್ಲಾಕ್ ಕೋ ಆಡಿನೇಟರ್ ಹುದ್ದೆಗೆ ಅರ್ಜಿ ಆಹ್ವಾನ

» ದಾವಣಗೆರೆ

ರಾಷ್ಟ್ರೀಯ ಪೋಷಣ್ ಅಭಿಯಾನ್ (ಪೋಷಣ್ 2.0) ಯೋಜನೆಯಡಿ ನೇರಗುತ್ತಿಗೆ ಆಧಾರದ ಮೇಲೆ ಹೊನ್ನಾಳಿಯಲ್ಲಿ ಖಾಲಿ ಇರುವ ಬ್ಲಾಕ್ ಕೋ ಆರ್ಡಿನೇಟರ್ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎಂ.ಸಿ.ಸಿ.ಬಿ ಬ್ಲಾಕ್, ಕುವೆಂಪು ನಗರ ದಾವಣಗೆರೆ ದೂ.ಸಂ:08192-264056 ಇಲ್ಲಿಗೆ ಅಗತ್ಯ ದಾಖಲೆಗಳೊಂದಿಗೆ ಡಿಸೆಂಬರ್ 9 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ರಾಜಾನಾಯ್ಕ ತಿಳಿಸಿದ್ದಾರೆ.

---

### ಕನ್ನಡ ರಾಜ್ಯೋತ್ಸವ : ಎಸ್‌ಆರ್‌ಎಸ್ ಹೆರಿಟೇಜ್ ಶಾಲೆ ಮಕ್ಕಳಿಂದ ಪಂಜಿನ ಮೆರವಣಿಗೆ

# ಕನ್ನಡದ ಜ್ಯೋತಿ ನಿರಂತರ ಬೆಳಗಲಿ: ಶಾಸಕ






» ಚಳ್ಳಕೆರೆ

ನಗರದ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಯ ವಿದ್ಯಾರ್ಥಿಗಳು, ಪೋಷಕರು ಹಾಗೂ ಶಾಲಾ ಆಡಳಿತ ಮಂಡಳಿ ಕನ್ನಡ ರಾಜ್ಯೋತ್ಸವವನ್ನು ಭವ್ಯವಾದ ಪಂಜಿನ ಮೆರವಣಿಗೆಯನ್ನು ನಗರದ ವಾಲ್ಮೀಕಿ ವೃತ್ತದಿಂದ ನೆಹರೂ ವೃತ್ತದವರೆಗೂ ನಡೆಸಲಾಯಿತು. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ, ಕನ್ನಡ ರಾಜ್ಯೋತ್ಸವ ಆಚರಣೆ ನಮ್ಮೆಲ್ಲರ ಹೆಮ್ಮೆಯ ಸಂಕೇತ. ನವೆಂಬರ್ ತಿಂಗಳು ನಾವೆಲ್ಲರೂ ಕನ್ನಡ ರಾಜ್ಯೋತ್ಸವವನ್ನು ಅರ್ಥಗರ್ಭಿತವಾಗಿ ಆಚರಿಸುತ್ತಾ ಬಂದಿದ್ದೇವೆ. ವಿಭಿನ್ನ ಎನ್ನುವಂತೆ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆ ಪಂಜಿನ ಮೆರವಣಿಗೆಯ ಮೂಲಕ ಕನ್ನಡ ಜ್ಯೋತಿಯನ್ನು ಬೆಳಗಿಸಿದೆ. ಇಂತಹ ಕಾರ್ಯಗಳು ಪ್ರತಿಯೊಬ್ಬರಿಗೂ ಹೆಚ್ಚು ಹತ್ತಿರವಾಗುತ್ತವೆ, ಕನ್ನಡದ ಮೇಲಿನ ಅಭಿಮಾನ ಎಂದಿಗೂ ಯಾರಿಗೂ ಕಡಿಮೆಯಾಗದಂತೆ ಜಾಗ್ರತೆ ವಹಿಸಿ ಎಂದರು. ಎಸ್‌ಆರ್‌ಎಸ್ ವಿದ್ಯಾಸಂಸ್ಥೆಯ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ಮಾತನಾಡಿ, ಕನ್ನಡ ರಾಜ್ಯೋತ್ಸವವೂ ಸೇರಿದಂತೆ ನಾಡಿನ ಸಂಸ್ಕೃತಿ, ಸಂಸ್ಕಾರದ ವಿಚಾರಗಳನ್ನು ಅರ್ಥಗರ್ಭಿತವಾಗಿ ನಮ್ಮ ಸಂಸ್ಥೆ ಸದಾಕಾಲ ಆಚರಣೆ ಮಾಡುತ್ತಾ ಬಂದಿದೆ. ಶಾಲೆಯಲ್ಲಿ ಪೋಷಕರ ದಿನಾಚರಣೆಯಂದು ತಂದೆ, ತಾಯಿಯ ಪಾದಪೂಜೆಮಾಡಿಸಲಾಗುತ್ತದೆ ಇದರಿಂದ ತಂದೆ ಮತ್ತು ಮಕ್ಕಳ ಸಂಬಂಧ ಮತ್ತಷ್ಟು ಗಟ್ಟಿಯಾಗಲಿದೆ. ಕನ್ನಡ ರಾಜ್ಯೋತ್ಸವ ಹಿನ್ನಲೆಯಲ್ಲಿ ಪಂಜಿನ ಮೆರವಣಿಗೆ ನಡೆಸುವ ಮೂಲಕ ಕನ್ನಡ ಜ್ಯೋತಿಯನ್ನು ಸದಾಬೆಳಗಿಸೋಣವೆಂಬ ಸಂದೇಶ ಸಾರಿದೆ ಎಂದರು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಸಂಸ್ಥೆ ಕಾರ್ಯದರ್ಶಿ ಸುಜಾತ ಲಿಂಗಾರೆಡ್ಡಿ, ಉಪಾಧ್ಯಕ್ಷ ಬಿ.ಎಲ್. ಅಮೋಘ್, ಆಡಳಿತಾಧಿಕಾರಿ ಪಿ.ಎನ್. ಕೃಷ್ಣಪ್ರಸಾದ್, ಪ್ರಾಂಶುಪಾಲ ವಿಜಯ್, ಸತ್ಯನಾರಾಯಣ ಉಪಸ್ಥಿತರಿದ್ದರು.

---

# ವಾಣಿಜ್ಯ, ಕೈಗಾರಿಕೆ, ಗಣಿಗಾರಿಕೆ ಸ್ಥಳಗಳಲ್ಲಿ ಅಂತರ್ಜಲ ಬಳಕೆಗೆ ಅನುಮತಿ ಕಡ್ಡಾಯ: ಡಿಸಿ ವೆಂಕಟೇಶ್ ಸೂಚನೆ

» ಚಿತ್ರದುರ್ಗ



ಕೃಷಿ ಹೊರತುಪಡಿಸಿ, ವಾಣಿಜ್ಯ, ಕೈಗಾರಿಕೆ ಹಾಗೂ ಗಣಿಗಾರಿಕೆ ಸಂಬಂಧಿಸಿದ ಸ್ಥಳಗಳಲ್ಲಿ ಕೊಳವೆ ಬಾವಿ ಕೊರೆದು ಅಂತರ್ಜಲ ಬಳಕೆ ಮಾಡಲು, ಕಡ್ಡಾಯವಾಗಿ ಜಿಲ್ಲಾ ಅಂತರ್ಜಲ ಸಮಿತಿಯಿಂದ ಅನುಮತಿ ಪಡೆಯಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಜರುಗಿದ ಜಿಲ್ಲಾ ಅಂತರ್ಜಲ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಂತರ್ಜಲ ಸಮಿತಿಯಿಂದ ಅಧಿಕೃತವಾಗಿ ನೊಂದಣಿಯಾದ ರಿಗ್ (ಬೋರ್‌ವೆಲ್ ಕೊರೆಯುವ ಲಾರಿ) ವಾಹನಗಳು ಮಾತ್ರ ಕೊಳವೆ ಬಾವಿ ಕೊರೆಯಬೇಕು. ನೊಂದಣಿ ಅವಧಿ ಪೂರ್ಣಗೊಂಡ ವಾಹನ ಮಾಲಿಕರು, ಕೂಡಲೇ ನೊಂದಣಿ ನವೀಕರಿಸಿಕೊಳ್ಳಬೇಕು. ವಾಣಿಜ್ಯ ಸ್ಥಳಗಳ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವಾಗ ಜಿಲ್ಲಾ ಅಂತರ್ಜಲ ಸಮಿತಿಯಿಂದ ನಿರಾಕ್ಷೇಪಣ ಪತ್ರ ಪಡೆದ ಬಗ್ಗೆ ಬೆಸ್ಕಾಂ ಅಧಿಕಾರಿಗಳು ಖಚಿತ ಪಡಿಸಿಕೊಳ್ಳಬೇಕು. ಅನುಪಯುಕ್ತ ಹಾಗೂ ವಿಫಲ ಕೊಳವೆ ಬಾವಿಗಳನ್ನು ಮುಚ್ಚಲಾಗಿದೆಯೇ ಎಂಬುದರ ಬಗ್ಗೆ ತಹಶೀಲ್ದಾರ್, ತಾ.ಪಂ. ಇಓ ಹಾಗೂ ಪಿಡಿಓಗಳು ತಪಾಸಣೆ ನಡೆಸಬೇಕು. ರೈತರು ವಿಫಲ ಕೊಳವೆ ಬಾವಿಗಳ ಕೇಸಿಂಗ್ ಪೈಪ್‌ನ್ನು ತೆಗೆಯುವುದರಿಂದ, ಇಂತಹ ಸ್ಥಳಗಳು ಅವಘಡಗಳಿಗೆ ಕಾರಣವಾಗುತ್ತವೆ. ಹೀಗಾಗಿ ವಿಫಲ ಕೊಳವೆ ಬಾವಿಗಳನ್ನು ಸೂಕ್ತ ರೀತಿಯಲ್ಲಿ ಮುಚ್ಚಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಈ ಬಗ್ಗೆ ತಿಳುವಳಿಕೆ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಸಭೆಯಲ್ಲಿ ಜಿ.ಪಂ.ಸಿಇಒ ಎಸ್.ಜೆ.ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್, ಹಿರಿಯ ಭೂ ವಿಜ್ಞಾನಿ ಬಸಂತ್ ಸೇರಿಂದತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

---

### ಹಸಿರು ಸೇನೆ ಡಾ. ವಾಸುದೇವ ಮೇಟಿ ಬಣದ ತಾಲೂಕು ಅಧ್ಯಕ್ಷರಾಗಿ ಚಿಕ್ಕೇನಹಳ್ಳಿ ಶ್ರೀನಿವಾಸ್ ಆಯ್ಕೆ



» ಚಳ್ಳಕೆರೆ

ನಗರದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಡಾ.ವಾಸುದೇವ ಮೇಟಿ ಬಣದ ನೂತನ ತಾಲೂಕು ಅಧ್ಯಕ್ಷರನ್ನಾಗಿ ಚಿಕ್ಕೇನಹಳ್ಳಿ ಶ್ರೀನಿವಾಸ್ ರವರನ್ನು ಆಯ್ಕೆ ಮಾಡಲಾಗಿದೆ ಎಂದು ಸಂಘಟನೆಯ ಜಿಲ್ಲಾಧ್ಯಕ್ಷ ಲಕ್ಷ್ಮಿಕಾಂತ ಲಿಂಗವರಹಟ್ಟಿ ಘೋಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಡಾ. ವಾಸುದೇವ ಮೇಟಿ ಬಣ ತಾಲೂಕಿನ ರೈತರ ಸಮಸ್ಯೆಗಳಿಗೆ ಧ್ವನಿಯಾಗಲು ನೂತನವಾಗಿ ತಾಲೂಕು ಘಟಕ ಹೋಬಳಿ ಹಾಗೂ ಗ್ರಾಮೀಣ ಘಟಕಗಳನ್ನು ಸ್ಥಾಪಿಸಲಾಗಿದ್ದು ಈ ಮೂಲಕ ರೈತ ಪರವಾದ ಹೋರಾಟಗಳಿಗೆ ಮುನ್ನುಡಿ ಬರೆಯಲಾಗಿದೆ ಎಂದು ತಿಳಿಸಿದರು.


ತಾಲೂಕು ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ, ಆಳುವ ಸರ್ಕಾರಗಳು ಚುನಾವಣೆಗಳಲ್ಲಿ ರೈತ ಪರವಾದ ನೀತಿಗಳನ್ನು ತಮ್ಮ ಪ್ರಣಾಳಿಕೆಗಳಲ್ಲಿ ಘೋಷಿಸಿ ಅಧಿಕಾರಕ್ಕೆ ಬಂದ ನಂತರ ರೈತರನ್ನು ಮರೆಯುತ್ತಿದ್ದು ರೈತರ ಹಿತ ಕಾಪಾಡುವಲ್ಲಿ ತಾರತಮ್ಯ ಸಾಗುತ್ತಿವೆ ಹೀಗಾಗಿ ರೈತರ ಸಮಸ್ಯೆಗಳನ್ನು ಪರಿಹರಿಸಲು ನಮ್ಮ ಸಂಘಟನೆಯ ಮೂಲಕ ಹೋರಾಟ ಮಾಡಲಿದೆ ಎಂದರು. ನಗರ ಸಭೆಯ ನಾಮಿನಿ ಸದಸ್ಯ ನೇತಾಜಿ ಪ್ರಸನ್ನ ಮಾತನಾಡಿ, ರೈತ ಸಂಘಟನೆಗಳು ಒಗ್ಗಟ್ಟಾಗಿ ಹೋರಾಡುವ ವ ನ ೋ ಭ ಾ ವ ವ ನ ್ನ ಬೆಳೆಸಿಕೊಳ್ಳಬೇಕು ರೈತರ ಸಮಸ್ಯೆಗಳು ಸರ್ಕಾರದ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಪರಿಹಾರವಾಗಬೇಕಾದರೆ ಎಲ್ಲ ಸಂಘಟನೆಗಳು ಒಂದೇ ಸೂರಿನಡಿ ಒಗ್ಗೂಡಿ ಹೋರಾಟಗಳನ್ನು ನಡೆಸಬೇಕಾದ ಅನಿವಾರ್ಯತೆ ನಿರ್ಮಾಣವಾಗಿದೆ ಎಂದರು.ಈ ವೇಳೆ ಸಂಘಟನೆಯ ಜಿಲ್ಲಾಧ್ಯಕ್ಷೆ ಲೋಲಾಕ್ಷಮ್ಮ, ಜಿಲ್ಲಾ ಕಾರ್ಯದರ್ಶಿ ಓಂಕಾರಮ್ಮ, ತಾಲೂಕು ಘಟಕದ ಅಧ್ಯಕ್ಷೆ ಜಯಲಕ್ಷ್ಮಿ, ಮಂಜುಳಾ, ನಿಜಲಿಂಗಪ್ಪ, ಮಲ್ಲಣ್ಣಗೌಡ, ನಾಗರಾಜ್, ಚಿಕ್ಕಣ್ಣ ಉಪಸ್ಥಿತರಿದ್ದರು.

---

### ಬಸವನಗೌಡ ಪಾಟೀಲ ಯತ್ನಾಳ್ ಮಾತಿಗೆ ಸಾಣೇಹಳ್ಳಿ ಶ್ರೀಗಳ ಖಂಡನೆ

# ಬಸವಣ್ಣ ಹೊಳೆಗೆ ಹಾರಿ ಸಾಯುವ ಹೇಡಿಗಳಾಗಿರಲಿಲ್ಲ

» ಹೊಸದುರ್ಗ



ಬಸವನಗೌಡ ಪಾಟೀಲ ಯತ್ನಾಳ್ ಅವರಿಗೆ ತಾವೇನು ಮಾತನಾಡುತ್ತೇವೆ ಎನ್ನುವ ಪ್ರಜ್ಞೆ ಇರುವಂತಿಲ್ಲ. ದೊಡ್ಡವರನ್ನು ಹೀಯಾಳಿಸಿದರೆ, ಬೈದರೆ, ಸಾರ್ವಜನಿಕರಿಂದ ಚಪ್ಪಾಳೆ ತಟ್ಟಿಸಿಕೊಂಡರೆ ತಾವು ದೊಡ್ಡವರಾಗುತ್ತೇವೆ ಎನ್ನುವ ಭ್ರಮಾಲೋಕದಲ್ಲೇ ತೇಲಾಡುವಂತಿದೆ ಎಂದು ಸಾಣೇಹಳ್ಳಿಶ್ರೀಗಳು ತಮ್ಮ ಹೇಳಿಕೆಯಲ್ಲಿ ಪ್ರತಿಕ್ರಿಯಿಸಿದ್ದಾರೆ. ಈ ಕುರಿತು ಗುರುವಾರ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿರುವ ಶ್ರೀಗಳು ಈ ಹಿಂದೆ ಗಣಪತಿ ವಿಚಾರವಾಗಿ ನಾವಾಡಿದ ಮಾತುಗಳನ್ನು ಅರ್ಥ ಮಾಡಿಕೊಳ್ಳದೆ ನಮ್ಮನ್ನೇ ನಿಂದಿಸಿದ್ದರು. ಅಹಂಕಾರಕ್ಕೆ ಉದಾಸೀನವೇ ಮದ್ದೆಂದು ನಾವು ಪ್ರತಿಕ್ರಿಯಿಸಿರಲಿಲ್ಲ.

ಈಗ ಬಸವಣ್ಣನವರು ತಮ್ಮ ಧರ್ಮಗುರುಗಳು, ಸಕಲ ಜೀವಾತ್ಮರ ಲೇಸ ಬಯಸಿದವರು ಎನ್ನುವುದನ್ನೇ ಮರೆತು ಮಾಧ್ಯಮಗಳಲ್ಲಿ ನಾಲಗೆ ಹರಿಬಿಟ್ಟಿದ್ದಾರೆ. ಅವರಿಗೆ ಬಸವಧರ್ಮದ ಪರಿಚಯವೇ ಇದ್ದಂತಿಲ್ಲ. ಬಸವಣ್ಣನವರು ಹೊಳೆಗೆ ಹಾರಿಕೊಂಡು ಸಾಯುವ ಹೇಡಿಗಳಾಗಿರಲಿಲ್ಲ. ಬಸವಣ್ಣನವರ ಇತಿಹಾಸವನ್ನು ಮತ್ತು ವಚನಗಳನ್ನು ಇನ್ನಾದರೂ ಓದುವ ಪ್ರಯತ್ನ ಮಾಡಲಿ. ಆಗ ಬಸವಣ್ಣನವರು ಮತ್ತು ಲಿಂಗಾಯತ ಧರ್ಮದ ನೈಜ ಪರಿಚಯವಾಗಿ ತಮ್ಮ ತಪ್ಪುಗಳನ್ನು ತಿದ್ದಿಕೊಳ್ಳಬಹುದು. ಅವರು ಧರ್ಮಗುರು ಬಸವಣ್ಣನವರ ಬಗ್ಗೆ, ಲಿಂಗಾಯತರ ಬಗ್ಗೆ ಆಡಿರುವ ಮಾತುಗಳನ್ನು ನಾವು ಅನಿವಾರ್ಯವಾಗಿ ಸಾರ್ವಜನಿಕವಾಗಿಯೇ ಖಂಡಿಸುತ್ತೇವೆ ಎಂದು ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

---

## ಪ್ರಮುಖ ಸುದ್ದಿ

### ವೀರಸಂಗೊಳ್ಳಿರಾಯಣ್ಣ ಯುವಕ ಸಂಘದಿಂದ ಕನ್ನಡರಾಜ್ಯೋತ್ಸವ

# ಕನ್ನಡಕ್ಕಾಗಿ ಮಿಡಿಯುವ ಮನಸ್ಸುಗಳು ಹೆಚ್ಚಾಗಲಿ: ತಿಪ್ಪೇಸ್ವಾಮಿ

» ಚಳ್ಳಕೆರೆ



ಚಿತ್ರದುರ್ಗದ ಕೋಟೆಯನ್ನು ರಕ್ಷಿಸಿದ ಒನಕೆ ಓಬವ್ವಳಂತೆ ಕಿತ್ತೂರನ್ನು ರಕ್ಷಿಸಿದ ವೀರಸಂಗೊಳ್ಳಿರಾಯಣ್ಣ ಇಂದಿಗೂ ಎಲ್ಲರಿಗೂ ಮಾದರಿ. ವೀರಸಂಗೊಳ್ಳಿರಾಯಣ್ಣನ ಹೋರಾಟ ಇತಿಹಾಸದಲ್ಲಿ ಸದಾಶಾಶ್ವತ ಇಂತಹ ಮಹಾನ್‌ವ್ಯಕ್ತಿಯಹೆಸರಿನಕನ್ನಡಸಂಘಟನೆ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಿಸಿ ಕನ್ನಡ ಜಾಗೃತಿ ಮೂಡಿಸುತ್ತಿರುವುದು ಹೆಮ್ಮೆಯ ವಿಷಯವೆಂದು ಹಿರಿಯ ಸಂಗೀತ ನಿರ್ದೇಶಕ, ಕಲಾವಿದ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ನಾಟಕ ಅಕಾಡೆಮೆ ಪ್ರಶಸ್ತಿ ಪುರಸ್ಕೃತ ಪಿ.ತಿಪ್ಪೇಸ್ವಾಮಿ ತಿಳಿಸಿದರು.

ಅವರು, ಗುರುವಾರ ನಗರದ ಎಸ್.ಆರ್.ರಸ್ತೆಯ ಸಂಗೊಳ್ಳಿರಾಯಣ್ಣ ವೃತ್ತದಲ್ಲಿ ಸಂಗೊಳ್ಳಿರಾಯಣ್ಣ ಯುವಕ ಸಂಘ ಹಮ್ಮಿಕೊಂಡಿದ್ದ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕನ್ನಡಕ್ಕಾಗಿ ಹೋರಾಡಿದ ಅನೇಕ ಮಹಾನಿಯರನ್ನು ನಾವೆಲ್ಲರೂ ನಿತ್ಯ ಸ್ಮರಿಸಬೇಕು. ಕನ್ನಡ ನಾಡು, ನುಡಿಗೆ ಚಳ್ಳಕೆರೆ ತಾಲ್ಲೂಕಿನ ಸಾಹಿತಿಗಳ ಕೊಡುಗೆ ಅಪಾರವಾಗಿದೆ ಎಂದರು.

ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ ಮಾತನಾಡಿ, ಕೇವಲ ಕಾರ್ಯಕ್ರಮಗಳಿಂದ ಮಾತ್ರ ಕನ್ನಡ ಭಾಷೆಯನ್ನು ಬೆಳೆಸಲು ಸಾಧ್ಯವಿಲ್ಲ. ಕನ್ನಡ ನಾಡಿನ ಪ್ರತಿಯೊಬ್ಬರೂ ಕನ್ನಡಕ್ಕಾಗಿ ಮಿಡಿಯುವ ಮನಸ್ಸನ್ನು ಹೊಂದಿರಬೇಕು. ಸರ್ಕಾರ ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಮಾಡಿದ್ದರೂ ಸ್ಥಳೀಯ ಆಡಳಿತ ಇದನ್ನು ಅನುಷ್ಠಾನಗೊಳಿಸುವಲ್ಲಿ ಹಿಂದೇಟು ಹಾಕುತ್ತಿವೆ ಎಂದರು.

ಕಾರ್ಯಕ್ರಮದಲ್ಲಿ ಕರವೆ ಅಧ್ಯಕ್ಷ ಟಿ.ಜೆ. ವೆಂಕಟೇಶ್, ನಗರಸಭಾ ಸದಸ್ಯರಾದ ಕವಿತಾನಾಯಕಿ, ಹೊಯ್ಸಳಗೋವಿಂದ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಸಿ.ಟಿ.ಶ್ರೀನಿವಾಸ್, ಸಿರಸ್ತೇದಾರ್ ಬಿ.ಗಿರೀಶ್, ಗೌರಮ್ಮ, ಆರೋಗ್ಯನಿರೀಕ್ಷಕಿಗೀತಾಕುಮಾರಿ, ಸಂಗೊಳ್ಳಿರಾಯಣ್ಣಸಂಘದ ಅಧ್ಯಕ್ಷ ಚಂದ್ರಶೇಖರ್, ಕಾರ್ಯಾಧ್ಯಕ್ಷ ರಾಜೇಶ್, ಸಂಘಟನಾ ಕಾರ್ಯದರ್ಶಿ ಪ್ರವೀಣ, ಮಾರುತಿ, ಶ್ರೀನಿವಾಸ್, ಬನಶ್ರೀ ಎಸ್. ಮಂಜುಳಮ್ಮ, ಪಗಡಲಬಂಡೆ ನಾಗೇಂದ್ರಪ್ಪ, ಬಿ.ಪಾಪಣ್ಣ, ಸಿ.ಭೋಜರಾಜ ಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಮಹಿಳಾ ಸ್ವಸಹಾಯ ಸಂಘಗಳಿಂದ ಅರ್ಜಿ

» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕ ಸಮರ್ಪಕ ವಸೂಲಾತಿಗಾಗಿ ಡೇ–ನಲ್ಮ್ ಅಭಿಯಾನದಡಿ ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರ ನೇಮಕಾತಿಗಾಗಿ ಆಸಕ್ತಿಯುಳ್ಳ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಡೇ–ನಲ್ಮ್ ನೊಂದಿಗೆ ನೋಂದಾಯಿಸಿಕೊಂಡ ಆಸಕ್ತ ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರುಗಳು ತಮ್ಮ ಆಸಕ್ತಿಯ ಅಭಿವ್ಯಕ್ತಿಯನ್ನು ಡೇ–ನಲ್ಮ್ ಹಿಂಬರಹದೊಂದಿಗೆ www.davanagerecity.mrc.gov.in ವೆಬ್‌ಸೈಟ್‌ನಲ್ಲಿ ನಿಗಧಿತ ನಮೂನೆಯಲ್ಲಿ ಡಿಸೆಂಬರ್ 26 ರೊಳಗಾಗಿ ಮಹಾನಗರಪಾಲಿಕೆ ಕಚೇರಿಗೆ ಸಲ್ಲಿಸಬೇಕು. ಗುರುತಿನ ಮತ್ತು ವಿಳಾಸದ ದಾಖಲೆಗಳಾದ ಆಧಾರ್ ಕಾರ್ಡ್, ವೋಟರ್‌ಐಡಿ, ರೇಷನ್‌ಕಾರ್ಡ್, ಪಾನ್ ಕಾರ್ಡ್ ನಕಲು ಪ್ರತಿ, ಮಹಿಳಾ ಸ್ವ–ಸಹಾಯ ಸಂಘದವರು ಅನುಬಂಧ–1ರಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಮಹಿಳಾ ಸ್ವ–ಸಹಾಯ ಸಂಘದ ವಿವರವನ್ನು ಅನುಬಂಧ–2 ರಲ್ಲಿ, ಮಹಿಳಾ ಸ್ವ–ಸಹಾಯ ಸಂಘದ ಆರ್ಥಿಕ ವಿವರವನ್ನು ಅನುಬಂಧ–3 ರಲ್ಲಿ, ಮಹಿಳಾ ಸ್ವ–ಸಹಾಯ ಸಂಘದ ಸದಸ್ಯರ ವಿದ್ಯಾರ್ಹತೆ ವಿವರವನ್ನು ಅನುಬಂಧ–4 ರಲ್ಲಿ, ಕನಿಷ್ಠ 7ನೇ ತರಗತಿ ಉತ್ತೀರ್ಣರಾಗಿರುವ ಅಂಕಪಟ್ಟಿ, ವರ್ಗಾವಣೆ ಪತ್ರ (ಟಿ.ಸಿ) ಯನ್ನು ಶಾಲೆಯ ಮುಖ್ಯ ಶಿಕ್ಷಕರಿಂದ ದೃಢೀಕರಿಸಿದ ಪ್ರತಿ, ಅಪರಾಧ, ಮಹಿಳಾ ಸ್ವ–ಸಹಾಯ ಸಂಘದ ದೃಢೀಕರಣವನ್ನು ಅನುಬಂಧ–6 ರಲ್ಲಿ ಸಲ್ಲಿಸಬೇಕು ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ತಾತ್ಕಾಲಿಕ ಪಟ್ಟಿ ಪ್ರಕಟ

» ಶಿವಮೊಗ್ಗ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಜಿಲ್ಲೆಯ 7 ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 126 ಅಂಗನವಾಡಿ ಕಾರ್ಯಕರ್ತೆಯರು ಮತ್ತು 448 ಸಹಾಯಕಿಯರ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಂಬಂಧಿಸಿದ ಅಂಗನವಾಡಿ, ಗ್ರಾಮ ಪಂಚಾಯತ್, ಮಹಾನಗರಪಾಲಿಕೆ, ನಗರ ಪಾಲಿಕೆ ಮತ್ತು ಪಟ್ಟಣ ಪಂಚಾಯಿತಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಈ ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಆಕ್ಷೇಪಣಾ ಅರ್ಜಿಗಳನ್ನು 4 ರೊಳಗಾಗಿ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾ ಕಚೇರಿಗೆ ಸಲ್ಲಿಸಬಹುದು. ಭದ್ರಾವತಿ ತಾಲ್ಲೂಕು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಕಾರ್ಯಕರ್ತೆಯರು 10, ಸಹಾಯಕಿಯರು 72, ಹೊಸನಗರ ಕಾರ್ಯಕರ್ತೆಯರು 7, ಸಹಾಯಕಿಯರು 35, ಸಾಗರ ಕಾರ್ಯಕರ್ತೆಯರು 21, ಸಹಾಯಕಿಯರು 62, ಶಿಕಾರಿಪುರ ಕಾರ್ಯಕರ್ತೆಯರು 8, ಸಹಾಯಕಿಯರು 55, ಶಿವಮೊಗ್ಗ ಕಾರ್ಯಕರ್ತೆಯರು 33, ಸಹಾಯಕಿಯರು 118, ಸೊರಬ ಕಾರ್ಯಕರ್ತೆಯರು 38, ಸಹಾಯಕಿಯರು 65 ಮತ್ತು ತೀರ್ಥಹಳ್ಳಿ ತಾಲ್ಲೂಕಿನಲ್ಲಿ ಕಾರ್ಯಕರ್ತೆಯರು 9 ಹಾಗೂ ಸಹಾಯಕಿರಯರು 41 ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ.

### ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಹೊಸಪೇಟೆ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಈ ಹಿಂದೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ನವಂಬರ್ 30ರ ವರೆಗೆ ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು https://ssp.postmatric.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು, ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿ ಪಡೆಯಲು https://bcwd.karnataka.gov.in ವೆಬ್‌ಸೈಟ್ ಗೆ ಭೇಟಿ ನೀಡಬೇಕು. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂ.ಸಂ: 8050770005, ಇ–ಮೇಲ್ bcwdhelpline@gmail.com ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ ದೂ. ಸಂ: 1902 ಅಥವಾ ಇ–ಮೇಲ್ postmatrichelp@karnataka.gov.in ಗೆ ಭೇಟಿ ನೀಡಬಹುದು.

### ಪತ್ತೆಗೆ ಮನವಿ

» ಚಿಕ್ಕಮಗಳೂರು

ಧನಂಜಯ 45 ವರ್ಷ ಇವರು ನಿರಾಶ್ರಿತರ ಕೇಂದ್ರದಲ್ಲಿದ್ದು, ನವೆಂಬರ್ 24 ರಂದು ಜಿಲ್ಲಾ ಆಸ್ಪತ್ರೆಯಲ್ಲಿ ಒಳ ರೋಗಿಯಾಗಿ ಚಿಕಿತ್ಸೆ ಪಡೆಯಲು ದಾಖಲಾಗಿದ್ದು ಹೃದಯಾಘಾತದಿಂದ ಮೃತ ಪಟ್ಟಿರುತ್ತಾರೆ. ಕಪ್ಪು ಮೈ ಬಣ್ಣ, ಕೋಲು ಮುಖ, ಸಾಧಾರಣ ಮೈಕಟ್ಟು, ಬಿಳಿ ಬಣ್ಣದ ಚೆಕ್ಸ್ ಶರ್ಟ್, ಕಪ್ಪು ಪ್ಯಾಂಟ್ ಧರಿಸಿರುತ್ತಾರೆ. ಮೃತ ವ್ಯಕ್ತಿಯ ವಾರಸುದಾರರು ಇದ್ದಲ್ಲಿ ನಗರ ಪೊಲೀಸ್ ಠಾಣೆಯಲ್ಲಿ ಇವರ ಬಗ್ಗೆ ಮಾಹಿತಿ ನೀಡಿ ಶವ ಪಡೆಯಬಹುದಾಗಿದೆ ,


## ಹೊಲಿಗೆ ಯಂತ್ರ ಖರೀದಿ, ಹೈನುಗಾರಿಕೆ, ಬಟ್ಟೆ ವ್ಯಾಪಾರಕ್ಕೆ ಬಂಡವಾಳ

# ಬದುಕಿಗೆ ಆಧಾರವಾದ ಗೃಹಲಕ್ಷ್ಮೀ ಯೋಜನೆ

» ಚಿತ್ರದುರ್ಗ

ಬೆಲೆ ಏರಿಕೆ, ಹಣದುಬ್ಬರ, ನಿರುದ್ಯೋಗದ ಸಮಸ್ಯೆಯಿಂದ ಬಳಲುತ್ತಿದ್ದ ಜನತೆಗೆ ರಾಜ್ಯ ಸರ್ಕಾರದ ಪಂಚ ಗ್ಯಾರೆಂಟಿ ಯೋಜನೆಗಳು ಆಸರೆಯಾಗಿವೆ. ಪದೇ ಪದೇ ಬರಗಾಲಕ್ಕೆ ತುತ್ತಾಗುವ ಚಿತ್ರದುರ್ಗ ಜಿಲ್ಲೆಯ ಮಹಿಳೆಯರ ಸ್ವಾವಲಂಬಿ ಬದುಕಿಗೆ ಗೃಹಲಕ್ಷ್ಮೀ ಯೋಜನೆ ವರದಾನವಾಗಿದೆ. ಮಕ್ಕಳ ಶಾಲೆ ಶುಲ್ಕ, ವೈದ್ಯಕೀಯ ಖರ್ಚು, ದಿನಸಿ ಖರೀದಿ ಹೀಗೆ ನಾನಾ ರೀತಿಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ ಮನೆಯ ಯಜಮಾನಿಗೆ ಪ್ರತಿ ತಿಂಗಳು ನೀಡುವ ರೂ.2000 ಸದ್ಬಳಕೆಯಾಗುತ್ತಿದೆ. ಇದರೊಂದಿಗೆ ಕೆಲ ಮಹಿಳೆಯರು ಸ್ವಂತ ವ್ಯಾಪಾರ, ಹೊಲಿಗೆ ಯಂತ್ರ ಖರೀದಿ, ಹೈನುಗಾರಿಕೆ, ಮನೆಗೆ ಫ್ರಿಡ್ಜ್ ಖರೀದಿಸಿ ಗೃಹಲಕ್ಷ್ಮೀ ಯೋಜನೆಯ ಸದುಯೋಗ ಪಡೆದುಕೊಂಡಿದ್ದಾರೆ.

ಜಿಲ್ಲೆಯಲ್ಲಿ ಕಳೆದ 2023 ರ ಆಗಸ್ಟ್ 30 ರಂದು ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರ ನೇತೃತ್ವದಲ್ಲಿ ಜರುಗಿದ ಸಮಾರಂಭದಲ್ಲಿ ಗೃಹಲಕ್ಷ್ಮಿ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡಲಾಗಿತ್ತು. ಇದೀಗ ಈ ಯೋಜನೆಯ ಸದ್ವಿನಿಯೋಗದ ಪರಿಣಾಮಗಳು ಜಿಲ್ಲೆಯಲ್ಲಿ ಗೋಚರಿಸಲಾರಂಭಿಸಿದ್ದು, ಮಹಿಳೆಯರ ಪಾಲಿಗೆ ಈ ಯೋಜನೆ ನಿಜಕ್ಕೂ ವರದಾನವಾಗಿದೆ.





### ರೂ.963 ಕೋಟಿ ಜಮೆ

ಚಿತ್ರದುರ್ಗ ಜಿಲ್ಲೆಯಲ್ಲಿ 4,05,282 ಪಡಿತರ ಚೀಟಿಗಳು ಇದ್ದು, ಇದರಲ್ಲಿ 3,91,639 ಫಲಾನುಭವಿಗಳು ಗೃಹಲಕ್ಷ್ಮೀ ಯೋಜನೆಯಡಿ ನೊಂದಣಿಯಾಗಿರುತ್ತಾರೆ. ಜಿಲ್ಲೆಯ ಅರ್ಹ ಮಹಿಳಾ ಫಲಾನುಭವಿಗಳ ಖಾತೆಗೆ ಸೆಪ್ಟಂಬರ್ ಅಂತ್ಯದ ವರೆಗೂ 963.58 ಕೋಟಿ ರೂ. ಜಮೆ ಮಾಡಲಾಗಿದೆ. ಇ–ಕೆವೈಸಿ ಹಾಗೂ ಎನ್.ಪಿ.ಸಿ.ಐ ಮ್ಯಾಪಿಂಗ್, ನಿಷ್ಕ್ರಿಯಗೊಂಡ ಬ್ಯಾಂಕ್ ಖಾತೆ ಮುಂತಾದ ಸಮಸ್ಯೆಗಳನ್ನು ಪರಿಹರಿಸಿ, ಅರ್ಹ ಮಹಿಳೆಯರಿಗೆ ಸಹ ಗೃಹಲಕ್ಷ್ಮೀ ಹಣ ಜಮೆ ಮಾಡಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕ್ರಮ ಕೈಗೊಂಡಿದೆ.

### ಹೊಲಿಗೆ ಯಂತ್ರ ಖರೀದಿ



ಜಿಲ್ಲೆಯ ಕಲ್ಕೆರೆ ಗ್ರಾಮದ ದ್ರಾಕ್ಷಾಯಿಣಿ ಪ್ರತಿ ತಿಂಗಳು ಬರುತ್ತಿದ್ದ ಗೃಹಲಕ್ಷ್ಮಿ ಯೋಜನೆಯ 2000 ಸಾವಿರ ರೂ.ಗಳನ್ನು ಕೂಡಿಸಿಟ್ಟುಕೊಂಡು, ಸ್ವಂತಕ್ಕೆ ಹೊಲಿಗೆ ಯಂತ್ರ ಖರೀದಿಸಿದ್ದು, ಮನೆಯ ಬದುಕಿಗೆ ದಾರಿದೀಪವಾಗಿದೆ ಎಂದು ಸಂತಸ ಹಂಚಿಕೊಂಡಿದ್ದಾರೆ. ಅದೇ ರೀತಿ ಬೇಡರ ಶಿವನಕೆರೆ ಗ್ರಾಮ ಸುನಿತಾ, ಗೃಹಲಕ್ಷ್ಮೀ ಯೋಜನೆ ಫಲಾನುಭವಿಯಾಗಿದ್ದಾರೆ. 14 ತಿಂಗಳಿಂದ ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು ರೂ.2000 ಹಣ ಅವರ ಖಾತೆಗೆ ಜಮೆಯಾಗುತ್ತಿದೆ. ಮಕ್ಕಳ ಶಾಲೆ ಶುಲ್ಕ ಜೊತೆಗೆ ಟೈಲರ್ ವೃತ್ತಿಯನ್ನು ಆರಂಭಿಸಿ ದುಡಿಮೆಯ ಮಾರ್ಗ ಕಂಡಕೊಳ್ಳಲು ಯೋಚಿಸಿದ ಸುನಿತಾ ಗೃಹಲಕ್ಷ್ಮೀ ಹಣದಲ್ಲಿ ಹೊಸ ಹೊಲಿಗೆ ಯಂತ್ರ ಖರೀದಿ ಮಾಡಿದ್ದಾರೆ.

### ಹೈನುಗಾರಿಕೆಗೆ ಇಂಬು

ಸರ್ಕಾರ ಹೈನುಗಾರಿಕೆ ಆರಂಭಿಸಲು ಬ್ಯಾಂಕುಗಳ ಮೂಲಕ ರಿಯಾಯಿತಿ ದರದಲ್ಲಿ ಸಾಲ ಸೌಲಭ್ಯ ನೀಡುತ್ತದೆ. ಅದರೆ ಕೆಲವೊಮ್ಮೆ ಅಗತ್ಯ ದಾಖಲೆಗಳ ಕೊರತೆಯಿಂದ ಈ ಸಾಲ ಸೌಲಭ್ಯ ಪಡೆಯುವಲ್ಲಿ ಸಾಕಷ್ಟು ಜನರು ವಂಚಿತರಾಗುತ್ತಾರೆ. ಅದರೆ ಚಿತ್ರದುರ್ಗ ತಾಲ್ಲೂಕಿನ ಮೆದಹಳ್ಳಿ ಗ್ರಾಮದ ವಸಂತ ಅವರಿಗೆ ಗೃಹಲಕ್ಷ್ಮೀ ಯೋಜನೆ ಹಣ ಹೈನುಗಾರಿಕೆ ಆರಂಭಿಸಲು ಇಂಬು ನೀಡಿದೆ. ಯೋಜನೆ ಹಣ ಕೂಡಿಟ್ಟು ಹಸು ಖರೀದಿಸಿರುವ ವಸಂತ ಹೈನುಗಾರಿಕೆ ವೃತ್ತಿಯನ್ನು ಗಂಭೀರವಾಗಿ ಪರಿಗಣಿಸಿದ್ದು, ಹಾಲು ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದಾರೆ.

### ಫ್ರಿಡ್ಜ್ ಖರೀದಿಸಿ ಮಹಿಳೆ ಸಂತಸ

ಗೃಹಲಕ್ಷ್ಮೀ ಯೋಜನೆ ಚಳ್ಳಕೆರೆಯ ಶಾಂತಿನಗರ ನಿವಾಸಿ ಶಾಂತಿಯವರ ಸಂತಸ ಇಮ್ಮಡಿಗೊಳಿಸಿದೆ. ಬಹುದಿನಗಳಿಂದ ಮನೆಗೊಂದು ಫ್ರಿಡ್ಜ್ ಖರೀದಿಸಲು ತವಕ ಪಡುತ್ತಿದ್ದ ಶಾಂತಿಯವರು ಗೃಹಲಕ್ಷ್ಮೀ ಹಣದಲ್ಲಿ ಮನಗೆ ಹೊಸ ಫ್ರಿಡ್ಜ್ ಖರೀದಿಸಿದ್ದಾರೆ.

ಸರ್ಕಾರದ ಮಹತ್ವಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳಲ್ಲಿಯೇ ಗೃಹಲಕ್ಷ್ಮಿ ಯೋಜನೆಯು ಮಹಿಳೆಯರ ಆರ್ಥಿಕ ಸಬಲೀಕರಣದ ನಿಟ್ಟಿನಲ್ಲಿ ಅತ್ಯಂತಪರಿಣಾಮಕಾರಿಯಾದಯೋಜನೆಯಾಗಿದ್ದು, ಯೋಜನೆಯನ್ನು ಎಲ್ಲ ಅರ್ಹ ಮಹಿಳೆಯರಿಗೆ ತಲುಪಿಸುವಲ್ಲಿ ಸರ್ಕಾರವೇ ನೇಮಿಸಿರುವ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಿವಣ್ಣ ಹಾಗೂ ಉಪಾಧ್ಯಕ್ಷರಾದ ಡಿ.ಎನ್. ಮೈಲಾರಪ್ಪ ಅವರು, ನಿರಂತರ ಶ್ರಮ ವಹಿಸುತ್ತಿದ್ದು, ಜಿಲ್ಲೆಯ ಜೊತೆಗೆ ಪ್ರತಿ ತಾಲ್ಲೂಕು ಮಟ್ಟದಲ್ಲಿಯೂ ಯೋಜನೆ ಅನುಷ್ಠಾನದ ಪ್ರಗತಿ ಪರಿಶೀಲನೆ ನಡೆಸುತ್ತಿದ್ದಾರೆ.

ಜಿಲ್ಲೆಯ ಎಲ್ಲ ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮೀ ಯೋಜನೆಯ ಲಾಭ ತಲುಪಿಸಲು ಪ್ರಯತ್ನಿಸಲಾಗುತ್ತಿದೆ. ಅದರಲ್ಲೂ ಗ್ರಾಮೀಣ ಭಾಗದ ಮಹಿಳೆಯರ ಜೀವನದಲ್ಲಿ ಗುಣಾತ್ಮಕ ಬದಲಾವಣೆ ತರುವುದರೊಂದಿಗೆ, ಎಲ್ಲ ಮಹಿಳೆಯರಿಗೂ ಭರವಸೆ ಹಾಗೂ ಆತ್ಮವಿಶ್ವಾಸ ಮೂಡಿಸಿದೆ ಜೊತೆಗೆ ಮಹಿಳೆಯರ ಸಬಲೀಕರಣ ಹಾಗೂ ಸ್ವಾವಲಂಬಿ ಬದುಕಿಗೆ ಗೃಹಲಕ್ಷ್ಮಿ ಯೋಜನೆ ವರವಾಗಿದೆ ಎನ್ನುತ್ತಾರೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಅವರು.

ಗೃಹಲಕ್ಷ್ಮಿ ಯೋಜನೆ ಪ್ರತಿಯೊಂದು ಅರ್ಹ ಮಹಿಳೆಯರಿಗೆ ತಲುಪಿಸಬೇಕೆನ್ನುವುದು ಜಿಲ್ಲಾಡಳಿತದ ಆಶಯವಾಗಿದ್ದು, ಅನುಷ್ಠಾನದಲ್ಲಿರುವ ಸಣ್ಣ ಪುಟ್ಟ ಸಮಸ್ಯೆಗಳನ್ನು ಪರಿಹರಿಸಿ, ತ್ವರಿತಗತಿಯಲ್ಲಿ ಅರ್ಹ ಫಲಾನುಭವಿಗಳಿಗೆ ಯೋಜನೆಯ ಲಾಭ ದೊರಕಬೇಕು, ಮಹಿಳೆಯರು ಯೋಜನೆಯನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲರಾಗಬೇಕು ಎನ್ನುತ್ತಾರೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು.

ಜಿಲ್ಲೆಯಲ್ಲಿ ಬಾಕಿ ಉಳಿದ ಪಡಿತರ ಕಾರ್ಡು ಹೊಂದಿರುವವರ ಪೈಕಿ ಅರ್ಹರನ್ನು ಗುರುತಿಸಿ ಯೋಜನೆಯಡಿ ನೊಂದಣಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಯೋಜನೆಯಡಿ ನೊಂದಣಿಯಾಗದವರ ವಿವರಗಳನ್ನು ತಾಲ್ಲೂಕು ಹಾಗೂ ಗ್ರಾಮವಾರು ಸಿದ್ದಪಡಿಸಲಾಗಿದೆ. ಈ ಮಾಹಿತಿಯನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಮೂಲಕ ಹಾಗೂ ತಾಲ್ಲೂಕು ಪಂಚಾಯಿತಿ ಇಓ ಹಾಗೂ ಸಿಡಿಪಿಓಗಳ ಸಮಿತಿ ರಚಿಸಿ ಸಂಪೂರ್ಣವಾಗಿ ಶೇ.100 ರಷ್ಟು ಯೋಜನೆಯನ್ನು ಜಿಲ್ಲೆಯ ಮಹಿಳೆಯರಿಗೆ ತಲುಪಿಸುವುದಾಗಿ ಜಿ.ಪಂ. ಸಿಇಓ ಎಸ್.ಜೆ. ಸೋಮಶೇಖರ್ ತಿಳಿಸಿದ್ದಾರೆ.



ಗೃಹಲಕ್ಷ್ಮಿ

ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು

₹2000

### ಬಟ್ಟೆ ವ್ಯಾಪಾರಕ್ಕೆ ನೆರವಾದ ಲಕ್ಷ್ಮೀ

ಚಳ್ಳಕೆರೆ ತಾಲ್ಲೂಕಿನ ನಾಗಗೊಂಡನಹಳ್ಳಿ ಗ್ರಾಮದ ಅಶ್ವಿನಿ ಗೃಹಲಕ್ಷ್ಮೀ ಹಣದಿಂದ ಬಟ್ಟೆ ವ್ಯಾಪಾರ ಆರಂಭಿಸಿದ್ದಾರೆ. ವ್ಯಾಪಾರವು ಸಹ ಚೆನ್ನಾಗಿ ನಡೆಯುತ್ತಿದ್ದು, ಸ್ವಾವಲಂಬಿ ಬದುಕಿನಡೆಗೆ ಹೆಜ್ಜೆ ಇರಿಸಿದ್ದಾರೆ.

# ಕಾನೂನು ನಿರ್ಮಾಣಕ್ಕೆ ಅಡಿಪಾಯ ಸಂವಿಧಾನ

**ಹೊಸದುರ್ಗ:** ದೇಶದ ಆಡಳಿತ ನಿಯಂತ್ರಿಸುವುದೇ ಕಾನೂನು. ಕಾನೂನು ನಿರ್ಮಾಣಕ್ಕೆ ಅಡಿಪಾಯ ಸಂವಿಧಾನ. ದೌರ್ಜನ್ಯ ತಡೆ ಕಾಯ್ದೆ ಸೇರಿ ಎಲ್ಲಾ ಕಾನೂನುಗಳ ರಚನೆ ಆಗಿರುವುದು ಸಂವಿಧಾನದಡಿ. ಪ್ರತಿಯೊಬ್ಬರೂ ಸಮಾನರಲ್ಲಿ ಸಮಾನರೆಂದು ಸಂವಿಧಾನ ತಿಳಿಸಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ವೈ.ಕೆ.ಬೇನಾಳ ಹೇಳಿದರು.

ಪಟ್ಟಣದ ಜೆಎಂಎಫ್ ನ್ಯಾಯಾಲಯದ ಸಭಾಂಗಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಹಾಗೂ ಅಭಿಯೋಜನೆ ಇಲಾಖೆ ವತಿಯಿಂದ ಆಯೋಜಿಸಿದ್ದ 75ನೇ ವರ್ಷದ ಸಂವಿಧಾನ ದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಂದು ಪ್ರತಿಯೊಬ್ಬರೂ ಸಂಭ್ರಮಿಸುವ ದಿನ. ಏಕೆಂದರೆ ಸಂವಿಧಾನ ಇರುವುದರಿಂದಲೇ ಎಲ್ಲರೂ ಸುರಕ್ಷಿತವಾಗಿದ್ದೇವೆ. ಕಾನೂನು ರಚಿಸುವ ಅಧಿಕಾರವನ್ನು ಸರಕಾರಕ್ಕೆ ಕೊಟ್ಟಿರುವುದು ನಮ್ಮ ಸಂವಿಧಾನ. ಪ್ರತಿಯೊಂದು ಕಾನೂನು ಸಂವಿಧಾನದ ತಳಹದಿಯಲ್ಲಿದೆ. ಯಾವುದೇ ವ್ಯಕ್ತಿ, ಪಕ್ಷ ಕಾನೂನಿನ ಅಡಿಯಲ್ಲಿಯೇ ಆಡಳಿತ ನಡೆಸಬೇಕು ಎಂದು ತಿಳಿಸಿದರು.

ಪ್ರಧಾನ ಸಿವಿಲ್ ನ್ಯಾಯಾಧೀಶ ಸಿ.ಪ್ರಸನ್ನಕುಮಾರ್ ಮಾತನಾಡಿ, 75ನೇ ವರ್ಷದ ಸಂವಿಧಾನ ದಿನಾಚರಣೆ ಆಚರಣೆ ಮಾಡುತ್ತಿದ್ದೇವೆ. ಇಂತಹ ಸಂದರ್ಭದಲ್ಲಿ ಪ್ರತಿಯೊಬ್ಬರೂ ಸಂವಿಧಾನದ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕು. ಹಕ್ಕು ಅನುಭವಿಸಿ ಕರ್ತವ್ಯ ಪಾಲನೆಯನ್ನು ಯಾರು ಮರೆಯಬಾರದು.



**ಜೆಎಂಎಫ್ ನ್ಯಾಯಾಲಯದ ಸಭಾಂಗಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಹಾಗೂ ಅಭಿಯೋಜನೆ ಇಲಾಖೆ ವತಿಯಿಂದ ಆಯೋಜಿಸಿದ್ದ 75 ನೇ ವರ್ಷದ ಸಂವಿಧಾನ ದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶ ವೈ.ಕೆ.ಬೇನಾಳ ಉದ್ಘಾಟಿಸಿದರು.**

## ಪ್ರಮುಖ ಸುದ್ದಿ

### ಪ್ರಗತಿವಿದ್ಯಾಲಯದಲ್ಲಿ ವೈಭವದ ಕನ್ನಡ ರಾಜ್ಯೋತ್ಸವ

# ಕನ್ನಡ ಸರ್ವತೋಮುಖ ಅಭಿವೃದ್ಧಿಗೆ ಕಂಕಣಬದ್ಧರಾಗಿ

» ಚಳ್ಳಕೆರೆ

ಕನ್ನಡ ರಾಜ್ಯೋತ್ಸವ ಆಚರಣೆ ನಾಡಿನ ಜನತೆಗೆ ಅಭಿಮಾನದ ಸಂಕೇತವಾಗಿದೆ. ಕೇವಲ ಸರ್ಕಾರವಷ್ಟೇಯಲ್ಲ, ಹಲವಾರು ಕನ್ನಡ ಪರ ಸಂಘಟನೆಗಳು ಸಹ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡುವ ಮೂಲಕ ಕನ್ನಡವನ್ನು ಗಟ್ಟಿಗೊಳಿಸುತ್ತಿದೆ. ಕನ್ನಡ ಭಾಷೆಯ ಮೌಲ್ಯವನ್ನು ಮತ್ತಷ್ಟು ಹೆಚ್ಚಿಸಲು ಅರ್ಥಪೂರ್ಣ ಕನ್ನಡ ರಾಜ್ಯೋತ್ಸವ ಆಚರಣೆ ಸಂತಸ ತಂದಿದೆ. ಪ್ರತಿಯೊಬ್ಬರೂ ನಮಗೆ ಬದುಕು ನೀಡಿದ ಕನ್ನಡ ಭಾಷೆಯ ಸರ್ವತೋಮುಖ ಅಭಿವೃದ್ಧಿಗೆಕಂಕಣಬದ್ದರಾಗಬೇಕುಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ನಗರಂಗೆರೆಯ ಪ್ರಗತಿವಿದ್ಯಾಲಯದಲ್ಲಿ ಶಾಲಾ ಆಡಳಿತಮಂಡಳಿ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕನ್ನಡ ಭಾಷೆಯ ಬೆಳವಣಿಗೆಗೆ ಶಿಕ್ಷಣ ಸಂಸ್ಥೆಗಳು ಸಾಕಷ್ಟು ಪರಿಶ್ರಮವಹಿಸುತ್ತಿರುವುದು ಸಂತಸದ ವಿಷಯವೆಂದರು.






ಪ್ರಾಸ್ತಾವಿಕವಾಗಿ ಮಾತನಾಡಿದ ಸಂಸ್ಥೆ ಕಾರ್ಯದರ್ಶಿ ಕೆ.ಆರ್ಚನಾ, ಸಾವಿರಾರು ವರ್ಷಗಳಿಂದ ನಾವೆಲ್ಲರೂ ಕನ್ನಡವನ್ನು ನಮ್ಮ ಮನದಾಳದಿಂದ ಬೆಳೆಸುವಲ್ಲಿ ಸಫಲವಾಗಿದ್ದೇವೆ. ಕನ್ನಡಕ್ಕಾಗಿ ಶ್ರಮಿಸಿ, ಹೋರಾಡಿದ ಕನ್ನಡ ಭಾಷೆಯನ್ನು ಗಟ್ಟಿಯಾಗಿ ನೆಲೆಯೂರಲು ಕಂಕಣಬದ್ಧರಾಗಿ ದುಡಿದ ಅನೇಕ ಹಿರಿಯರನ್ನು ನಾವೆಲ್ಲರೂ ನೆನಪಿಸಿಕೊಳ್ಳಬೇಕು.

ವಿಶೇಷವಾಗಿ ಕನ್ನಡ ಸಾಹಿತ್ಯಕ್ಕೆ ವಿಶೇಷ ಗೌರವತಂದುಕೊಟ್ಟ ತಳುಕಿನ ತರಾಸು, ವೆಂಕಣ್ಣಯ್ಯ, ಬೆಳಗೆರೆ ಕೃಷ್ಣಶಾಸ್ತ್ರಿ, ಜಾನಕಮ್ಮ, ಜಾನಪದ ಸಿರಿ ಸಿರಿಯಜ್ಜಿ ಇವರೆಲ್ಲರೂ ನಮಗೆ ಸದಾ ಆದರ್ಶಪ್ರಾಯರು ಎಂದರು.

ಸಂಸ್ಥೆಯ ಅಧ್ಯಕ್ಷ ಕೆ.ರಮೇಶ್‌ಬಾಬು ಮಾತನಾಡಿ, ಕನ್ನಡ ವೈವಿಧ್ಯತೆಯನ್ನು ಬಣ್ಣಿಸಲು ಶಬ್ದಗಳೇ ಸಾಲದು. ನಾವೆಲ್ಲರೂ ನಮ್ಮ ಹೃದಯ ಭಾಷೆಯಾದ ಕನ್ನಡದ ಬೆಳವಣಿಗೆಗೆ ಸದಾ ಸ್ಪೂರ್ತಿಯಾಗಬೇಕು. 8 ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದ ಏಕೈಕ ಭಾಷೆ ಎಂದರೆ ಅದು ಕನ್ನಡ ಎಂದರು. ಇದೇ ಸಂದರ್ಭದಲ್ಲಿ ಶಾಲೆಯ ಹಲವಾರು ವಿದ್ಯಾರ್ಥಿಗಳು ಅನೇಕ ವೇಷಭೂಷಣದಲ್ಲಿ ಕಂಡರು.

ಕಾರ್ಯಕ್ರಮದಲ್ಲಿ ಉಪಪ್ರಾಂಶುಪಾಲ ಮಾಲಿನಿಜಾನ್, ಆಡಳಿತಾಧಿಕಾರಿ ವೈಷ್ಣವಿಢಗೆ, ಶಿಕ್ಷಕಿಯರಾದ ಎನ್. ರೋಹಿಣಿ, ಮಂಜುಳಾ, ಬಿ.ಶಿವಮಾಲ ಮುಂತಾದವರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T